**ಸಂಪುಟ:** 05 **ಸಂಚಿಕೆ:** 347 **ಪುಟಗಳು:** 08 **ಭಾನುವಾರ** 01 **ಮಾರ್ಚ್** 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಕಲ್ಲಿಗೆ ಸುಂದರ ಆಕಾರ
ಬರಬೇಕಾದರೆ
ಉಳಿಯ ಪೆಟ್ಟು ಬೀಳಲೇ ಬೇಕು
ಬದುಕು ಸುಂದರ ಆಗಲು
ಕಷ್ಟ ಸುಖಗಳನ್ನು
ಅನುಭವಿಸಲೇ ಬೇಕು...

## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
**9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com

## ಪ್ರಾಧಿಕಾರಗಳು, ನಿಗಮ ಮಂಡಳಿಗಳ ಅಧ್ಯಕ್ಷರ ಅವಧಿ ವಿಸ್ತರಣೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ 7 ಜಿಲ್ಲೆಗಳ ನಗರಾಭಿವೃದ್ಧಿ ಪ್ರಾಧಿಕಾರಗಳು, ನಿಗಮ, ಮಂಡಳಿಗಳ ಅಧ್ಯಕ್ಷರ ಅಧಿಕಾರ ಅವಧಿಯನ್ನು ವಿಸ್ತರಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಈ ಮೂಲಕ 10 ಮಂದಿಯ ಅಧ್ಯಕ್ಷರ ಅಧಿಕಾರ ಅವಧಿ ವಿಸ್ತರಣೆಯಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಈ ಬಗ್ಗೆ ಮನವಿ ಮಾಡಿದ್ದರು.2024ರ ಫೆಬ್ರವರಿ 28ರಂದು ವಿವಿಧ ನಿಗಮ ಮಂಡಳಿ ಹಾಗೂ ಪ್ರಾಧಿಕಾರಗಳಿಗೆ ನೇಮಕಗೊಂಡಿದ್ದ ಅಧ್ಯಕ್ಷರ ಎರಡು ವರ್ಷಗಳ ಅವಧಿ ಮುಕ್ತಾಯಗೊಳ್ಳುತ್ತಿದೆ. ಇತ್ತೀಚೆಗೆ ಕೆಲವರಿಗೆ ರಾಜ್ಯ ಸಚಿವ ಸ್ಥಾನಮಾನ ನೀಡಿ ಅವರ ಅವಧಿಯನ್ನು ಮುಂದುವರಿಸಲಾಗಿತ್ತು. ಆದರೆ, ಆ ಪಟ್ಟಿಯಲ್ಲಿ ಅಧ್ಯಕ್ಷರು ಮತ್ತು ಕೆಲವು ಯೋಜನಾ ಪ್ರಾಧಿಕಾರಗಳ ಅಧ್ಯಕ್ಷರನ್ನು ಕೈಬಿಡಲಾಗಿತ್ತು. ಪ್ರಸ್ತುತ ಈ ಸ್ಥಾನಗಳಿಗೆ ಬೇರೆ ಹೊಸ ಅಧ್ಯಕ್ಷರನ್ನು ನೇಮಕ ಮಾಡಿಲ್ಲದ ಕಾರಣ, ಆಡಳಿತಾತ್ಮಕ ಹಿತದೃಷ್ಟಿಯಿಂದ ಅಥವಾ ಮುಂದಿನ ಆದೇಶದವರೆಗೆ ಈ ಕೆಳಕಂಡ 10 ಮಂದಿ ಅಧ್ಯಕ್ಷರನ್ನು ಮುಂದುವರಿಸುವಂತೆ ಡಿಸಿಎಂ ಶಿಫಾರಸು ಮಾಡಿದ್ದರು. ಸರ್ಕಾರದ ವಿವಿಧ ಇಲಾಖೆಗಳ ಅಧೀನದಲ್ಲಿ ಬರುವ ನಿಗಮ, ಮಂಡಳಿ ಹಾಗೂ ಪ್ರಾಧಿಕಾರಗಳ ನಾಮನಿರ್ದೇಶನಗೊಂಡ ಅಧ್ಯಕ್ಷರುಗಳ ಮುಕ್ತಾಯಗೊಂಡ/ಮುಕ್ತಾಯಗೊಳ್ಳಲಿರುವ ಅವಧಿಯನ್ನು ಮುಂದಿನ ಆದೇಶದವರೆಗೆ ಮುಂದುವರೆಸಿ ಆದೇಶಿಸಿದೆ. ಮೇಲ್ಕಂಡ ಆದೇಶದಂತೆ ಆಡಳಿತ ಇಲಾಖೆಯ ಸಂಬಂಧಿಸಿದೆ, ಅಧ್ಯಕ್ಷರು ಕಾರ್ಯನಿರ್ವಹಿಸಲು ಸೂಕ್ತ ಅಧಿಸೂಚನೆ ಹೊರಡಿಸುವಂತೆ ಆಡಳಿತ ಇಲಾಖೆಗಳಿಗೆ ಸೂಚಿಸಲಾಗಿದೆ.

## ಬಡವರ ಮನೆ ಹಣ ತಿಂದ್ರೆ, ಹುಳ ಬಿದ್ದು ಸಾಯ್ತಾರೆ

• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗೆ ಬೆಂಗಳೂರಿನ ಕೋಗಿಲು ಬಡಾವಣೆಯಲ್ಲಿ ತೆರವು ಕಾರ್ಯಾಚರಣೆ ಸಾಕಷ್ಟು ಸದ್ದು ಗದ್ದಲಕ್ಕೆ ಕಾರಣವಾಗಿತ್ತು. ವಸತಿ ರಹಿತರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುವ ಭರವಸೆ ನೀಡಿದೆ. ಆದರೆ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ 17,14,946 ಮಂದಿಗೆ ಸ್ವಂತ ಸೂರಿಲ್ಲ. ಅಷ್ಟೇ ಅಲ್ಲ, 7,03,976 ಮಂದಿಗೆ ಸ್ವಂತ ನಿವೇಶನವೂ ಇಲ್ಲ.

ಬಡವರ ಮನೆ ಹಣ ತಿಂದ್ರೆ, ಹುಳ ಬಿದ್ದು ಸಾಯ್ತಾರೆ, ವಸತಿ ಇಲಾಖೆಯಲ್ಲಿ ಹಗರಣ ನಡೆದಿದ್ರೆ, ಸಿಬಿಐ ತನಿಖೆಯಾಗಲಿ ಎಂದು ಆಗ್ರಹಿಸಿದರು! ವಸತಿ ಇಲಾಖೆ ನೀಡಿರುವ ಮಾಹಿತಿಯ ಪ್ರಕಾರ ಪ್ರಧಾನ ಮಂತ್ರಿ ಆವಾಸ್ ಯೋಜನೆನಗರದಡಿ 2016-17 ಹಾಗೂ 2017- 18 ನೇ ಸಾಲಿನಲ್ಲಿ ರಾಜ್ಯಾದ್ಯಂತ ನಡೆಸಿದ ಸಮೀಕ್ಷೆಯ ಪ್ರಕಾರ 3,02,187 ವಸತಿ ರಹಿತರು ಇದ್ದಾರೆ. ಹಾಗೂ 10,27,657 ಮಂದಿ ನಿವೇಶನ ರಹಿತರು ಕಂಡು ಬಂದಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರದ ಸಾಕಷ್ಟು ಯೋಜನೆಗಳು ಇವೆ. ಆದರೆ ಇಂದಿಗೂ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಸ್ವಂತ ಮನೆ ಇಲ್ಲದ ಹಾಗೂ ನಿವೇಶನವೂ ಇಲ್ಲದ ಜನರು ರಾಜ್ಯದಲ್ಲಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ಎಂಬುವುದು ಪ್ರಮುಖವಾಗುತ್ತದೆ.

# ಅಮೆರಿಕ, ಇಸ್ರೇಲ್ ಜಂಟಿ ಸಮರ ಇರಾನ್ ಪ್ರತೀಕಾರ






### ಇರಾನ್ ಮೇಲೆ ಸೇನಾ ಕಾರ್ಯಾಚರಣೆ ಆರಂಭಿಸಿದ ಅಮೆರಿಕ

• **ಉದಯವಾಹಿನಿ, ನವದೆಹಲಿ**

ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ಇರಾನ್ ರಾಜಧಾನಿ ಟೆಹ್ರಾನ್ ಮತ್ತು ದೇಶದ ಇತರ ನಗರಗಳನ್ನು ಮೇಲೆ ದಾಳಿ ನಡೆಸಿದ ಬೆನ್ನಲ್ಲೇ, ಅಮೆರಿಕ ಮತ್ತು ಇರಾನ್ ನಡುವಿನ ಉದ್ವಿಗ್ನತೆ ತೀವ್ರ ಸ್ವರೂಪ ಪಡೆದಿದೆ. ದಾಳಿಗೆ ಪ್ರತ್ಯುತ್ತರವಾಗಿ, ಇಸ್ರೇಲ್ ಮತ್ತು ಅಮೆರಿಕದ ನೆಲೆಗಳಿರುವ ಮಧ್ಯಪ್ರಾಚ್ಯದ ಹಲವಾರು ದೇಶಗಳ ಮೇಲೆ ಇರಾನ್ ಕ್ಷಿಪಣಿಗಳನ್ನು ಹಾರಿಸುವ ಮೂಲಕ ಪ್ರತೀಕಾರ ತೀರಿಸಿಕೊಂಡಿದೆ. ಇದರೊಂದಿಗೆ ಮಧ್ಯಪ್ರಾಚ್ಯದಲ್ಲಿ ಭೀಕರ ಯುದ್ಧದ ಕಾರ್ಮೋಡ ಆವರಿಸಿದೆ. ದಾಳಿ, ಪ್ರತಿದಾಳಿಗಳ ನಂತರ ಮಾತನಾಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕ ಸೇನೆಯು ಇರಾನ್‌ನಲ್ಲಿ ಪ್ರಮುಖ ಯುದ್ಧ ಕಾರ್ಯಾಚರಣೆ ಪ್ರಾರಂಭಿಸಿದೆ ಎಂದು ಘೋಷಿಸಿದ್ದಾರೆ. ಇರಾನ್ ಆಡಳಿತದಿಂದ ಸನ್ನಿಹಿತ ಬೆದರಿಕೆ ತೊಡೆದುಹಾಕುವ ಮೂಲಕ ಅಮೆರಿಕವನ್ನು ರಕ್ಷಿಸುವುದು ಇದರ ಉದ್ದೇಶವಾಗಿದೆ. ಇದನ್ನು ಬೃಹತ್ ಮಿಲಿಟರಿ ಕಾರ್ಯಾಚರಣೆ ಎಂದು ಟ್ರಂಪ್ ಬಣ್ಣಿಸಿದ್ದಾರೆ. ಇದರಲ್ಲಿ ಅಮೆರಿಕನ್ನರೂ ಜೀವ ಕಳೆದುಕೊಳ್ಳಬಹುದು ಎಂದು ಹೇಳಿದ್ದಾರೆ.

**ಅಮೆರಿಕದ ನೆಲೆಗಳ ಮೇಲೆ ಇರಾನ್ ಗುರಿ:** ಮಧ್ಯಪ್ರಾಚ್ಯದಲ್ಲಿರುವ ಅಮೆರಿಕದ ನಾಲ್ಕು ನೆಲೆಗಳ ಮೇಲೆ ಗುರಿಯಿಟ್ಟಿದೆ ಎಂದು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹೇಳಿದೆ. ಅಮೆರಿಕ ಮತ್ತು ಇಸ್ರೇಲ್ ದಾಳಿಗಳಿಗೆ ಪ್ರತೀಕಾರವಾಗಿ ಮಧ್ಯಪ್ರಾಚ್ಯದಾದ್ಯಂತ ಇರಾನ್ ದಾಳಿ ನಡೆಸುತ್ತಿದೆ. ಕುವೈತ್, ಕತಾರ್, ಯುಎಇ, ಬಹ್ರೇನ್ ಮತ್ತು ಸೌದಿ ಅರೇಬಿಯಾಗಳಲ್ಲೂ ಕ್ಷಿಪಣಿಗಳು ಅಪ್ಪಳಿಸಿವೆ ಎಂದು ವರದಿಯಾಗಿದೆ.

ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಅನ್ನು ಉಲ್ಲೇಖಿಸಿ, ಇರಾನ್ ನಗರಗಳ ಮೇಲೆ ಅಮೆರಿಕ ಮತ್ತು ಇಸ್ರೇಲಿ ದಾಳಿಗಳಿಗೆ ಪ್ರತಿಕ್ರಿಯೆಯಾಗಿ ಮಧ್ಯಪ್ರಾಚ್ಯದಲ್ಲಿ ಇರುವ ನಾಲ್ಕು ಅಮೆರಿಕದ ನೆಲೆಗಳನ್ನು ಗುರಿಯಾಗಿಸಿ ದಾಳಿ ನಡೆದಿದೆ ಎಂದು ಇರಾನ್‌ನ ಮಾಧ್ಯಮವೊಂದು ವರದಿ ಮಾಡಿದೆ.

### ಏರ್ ಇಂಡಿಯಾ, ಇಂಡಿಗೋ ವಿಮಾನ ಸ್ಥಗಿತ

ದಾಳಿಗಳ ಹಿನ್ನೆಲೆಯಲ್ಲಿ, ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಮಧ್ಯಪ್ರಾಚ್ಯದ ಎಲ್ಲಾ ಸ್ಥಳಗಳಿಗೆ ತನ್ನ ಎಲ್ಲಾ ವಿಮಾನಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಏರ್ ಇಂಡಿಯಾ ಶನಿವಾರ ತಿಳಿಸಿದೆ. ನಮ್ಮ ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆ ಕಾಪಾಡಿಕೊಳ್ಳಲು ನಾವು ಬದ್ಧರಾಗಿದ್ದೇವೆ. ನಮ್ಮ ವಿಮಾನ ಕಾರ್ಯಾಚರಣೆಗಳಿಗೆ ಸುರಕ್ಷತೆ ಮತ್ತು ಭದ್ರತಾ ವಾತಾವರಣದ ಬಗ್ಗೆ ನಿರ್ಣಯಿಸಲಾಗುವುದು. ಅಗತ್ಯ ವಿಮಾನ ಕಾರ್ಯಾಚರಣೆಗಳನ್ನು ಪೂರ್ವಭಾವಿಯಾಗಿ ಹೊಂದಿಸಲಾಗುವುದು. ನಮ್ಮ ತಂಡಗಳು ಪ್ರಯಾಣಿಕರಿಗೆ ಅಗತ್ಯವಿರುವ ಎಲ್ಲಾ ಬೆಂಬಲ ನೀಡಲಿವೆ ಎಂದು ಏರ್ ಇಂಡಿಯಾ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದೆ.

ಬಹ್ರೇನ್‌ನಲ್ಲಿರುವ ಯುಎಸ್ ಐದನೇ ಫ್ಲೀಟ್ ಬೇಸ್, ಕತಾರ್‌ನಲ್ಲಿರುವ ಅಲ್ ಉದ್ಯೆದ್ ಏರ್ ಬೇಸ್, ಯುಎಇಯ ಅಲ್ ಧಾಫ್ರಾ ಏರ್ ಬೇಸ್ ಮತ್ತು ಕುವೈತ್‌ನಲ್ಲಿರುವ ಅಲ್ ಸೇಲಂ ಏರ್ ಬೇಸ್ ಗುರಿಯಾಗಿಸಿ ಇರಾನಿನ ಕ್ಷಿಪಣಿ ದಾಳಿಗಳು ನಡೆದಿವೆ. ಶನಿವಾರ ದೋಹಾದಾದ್ಯಂತ ಸ್ಫೋಟಗಳು ಕೇಳಿಬಂದಿವೆ. ಕತಾರ್‌ನ ರಕ್ಷಣಾ ಸಚಿವಾಲಯವು ಗಲ್ಫ್ ರಾಜ್ಯವನ್ನು ಗುರಿಯಾಗಿಸಿಕೊಂಡು ಮಾಡಿದ್ದ ಹಲವಾರು ಕ್ಷಿಪಣಿ ದಾಳಿಗಳನ್ನು ತಡೆಹಿಡಿದಿದೆ ಎಂದು ಹೇಳಿದೆ.

### ತುರ್ತು ಪರಿಸ್ಥಿತಿ ಘೋಷಣೆ

ಇಸ್ರೇಲ್ ದಾಳಿ ನಡೆಸಿದ ಬಳಿಕ ಇರಾನ್ ತನ್ನ ವಾಯುಪ್ರದೇಶವನ್ನು ಬಂದ್ ಮಾಡಿದೆ. ಇರಾನ್ ರಾಜಧಾನಿ ಟೆಹ್ರಾನ್‌ನಾದ್ಯಂತ ಸ್ಫೋಟಗಳು ಕೇಳಿಬರುತ್ತಿದ್ದಂತೆ, ತುರ್ತು ಪರಿಸ್ಥಿತಿ ಘೋಷಣೆಯಾಗಿದೆ. ವಿಮಾನದ ಪೈಲಟ್‌ಗಳಿಗೆ ಎಚ್ಚರಿಕೆ ಸಂದೇಶ ರವಾನೆಯಾಗಿದೆ. ಇಸ್ರೇಲ್‌ನಾದ್ಯಂತ ಕೆಲ ನಿಮಿಷಗಳ ಕಾಲ ಸೈರನ್‌ಗಳು ಮೊಳಗಿಸಲಾಯಿತು. ಇಸ್ರೇಲ್ ಕಡೆಗೆ ಕ್ಷಿಪಣಿಗಳನ್ನು ಹಾರಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಪೂರ್ವಭಾವಿ ಎಚ್ಚರಿಕೆ ನೀಡಿರುವುದಾಗಿ ಇಸ್ರೇಲ್ ಮಿಲಿಟರಿ ಹೇಳಿದೆ. ದಾಳಿ ವೇಳೆ ಎಲ್ಲಾ ನಾಗರಿಕರು ಸಂರಕ್ಷಿತ ಸ್ಥಳಗಳ ಬಳಿ ಇರುವಂತೆ ರಾಷ್ಟ್ರೀಯ ಎಚ್ಚರಿಕೆ ರವಾನಿಸಲಾಗಿದೆ ಎಂದು ಐಡಿಎಫ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿತ್ತು.ಟೆಲ್ ಅವಿವ್‌ನಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ.

### ಪಾಕಿಸ್ತಾನ ಬೆಂಬಲಿಸಿದ ಅಮೆರಿಕ

ನೆರೆಯ ಅಫ್ಘಾನಿಸ್ತಾನದ ಮೇಲೆ ಯುದ್ಧ ಸಾರಿರುವ ಪಾಕಿಸ್ತಾನವನ್ನು ಬೆಂಬಲಿಸುವುದಾಗಿ ಅಮೆರಿಕ ತಿಳಿಸಿದೆ. ಸದ್ಯದ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಅವಲೋಕಿಸುತ್ತಿದ್ದು, ತಾಲಿಬಾನ್ ದಾಳಿಯನ್ನು ಪಾಕಿಸ್ತಾನ ಸೂಕ್ತವಾಗಿ ನಿರ್ವಹಣೆ ಮಾಡಿದ್ದು, ಪಾಕಿಸ್ತಾನವನ್ನು ಬೆಂಬಲಿಸುವುದಾಗಿ ಪಾಕಿಸ್ತಾನದ ಅಧೀನ ಕಾರ್ಯದರ್ಶಿ ಜೊತೆಗಿನ ಮಾತುಕತೆಯ ನಂತರ, ರಾಜಕೀಯ ವ್ಯವಹಾರಗಳ ಅಧೀನ ಕಾರ್ಯದರ್ಶಿ ಅಲಿಸನ್ ಹೂಕರ್ ಎಕ್ಸ್ ಜಾಲತಾಣದಲ್ಲಿ ತಿಳಿಸಿದ್ದಾರೆ.ಪಾಕಿಸ್ತಾನ ವಿದೇಶಾಂಗ ಕಾರ್ಯದರ್ಶಿ ಅಮ್ನಾ ಬಲೋಚ್ ಮಾತನಾಡಿ, ಪಾಕಿಸ್ತಾನ ಮತ್ತು ತಾಲಿಬಾನ್ ನಡುವಿನ ಇತ್ತೀಚಿನ ಸಂಘರ್ಷದಲ್ಲಿ ಸಾವನ್ನಪ್ಪಿದ ಜೀವಗಳಿಗೆ ಸಂತಾಪ ಸೂಚಿಸಿದರು. ಅವರು ಪಾಕ್ ಮತ್ತು ಅಫ್ಘಾನ್ ನಡುವಿನ ಸಂಘರ್ಷ ಕೊನೆಗೊಳಿಸುವ ಕುರಿತು ಕರೆ ನೀಡಲಿಲ್ಲ.




### ಭಾರತೀಯರಿಗೆ ಎಚ್ಚರಿಕೆ

ಇಸ್ರೇಲ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು, ಈ ಪ್ರದೇಶದಲ್ಲಿನ ಪ್ರಸ್ತುತ ಭದ್ರತಾ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಇಸ್ರೇಲ್‌ನಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳು ಅತ್ಯಂತ ಎಚ್ಚರಿಕೆಯಿಂದ ವರ್ತಿಸಲು ಮತ್ತು ಎಲ್ಲಾ ಸಮಯದಲ್ಲೂ ಜಾಗರೂಕರಾಗಿರಲು ಸೂಚಿಸಿದೆ. ಇಸ್ರೇಲ್ ಅಧಿಕಾರಿಗಳು ಮತ್ತು ಹೋಮ್ ಫ್ರಂಟ್ ಕಮಾಂಡ್ ಹೊರಡಿಸಿದ ಸುರಕ್ಷತಾ ಮಾರ್ಗಸೂಚಿಗಳು ಮತ್ತು ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಭಾರತೀಯ ಪ್ರಜೆಗಳಿಗೆ ಬಲವಾಗಿ ಸೂಚಿಸಲಾಗಿದೆ.

### ಸುರಕ್ಷತಾ ಸಲಹೆ ನೀಡಿದ ಭಾರತೀಯ ರಾಯಭಾರ ಕಚೇರಿ

ಜಂಟಿ ಮಿಲಿಟರಿ ದಾಳಿ ಹಿನ್ನೆಲೆಯಲ್ಲಿ, ಅನಗತ್ಯ ಬೆಳವಣಿಗೆ ತಪ್ಪಿಸಲು ಮತ್ತು ಅತ್ಯಂತ ಎಚ್ಚರಿಕೆಯಿಂದ ವರ್ತಿಸುವಂತೆ ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಭಾರತೀಯ ಪ್ರಜೆಗಳಿಗೆ ತಿಳಿಸಿದೆ. ರಾಯಭಾರ ಕಚೇರಿಯು ತುರ್ತು ಸಂಪರ್ಕ ವಿವರಗಳನ್ನು ಸಹ ನೀಡಲಾಗಿದ್ದು, ಸುದ್ದಿಗಳನ್ನು ಮೇಲ್ವಿಚಾರಣೆ ಮಾಡುತ್ತ, ಪರಿಸ್ಥಿತಿಯ ಅರಿತುಕೊಳ್ಳುವಂತೆ ಭಾರತೀಯರಿಗೆ ಕರೆ ನೀಡಿದೆ. ಇರಾನ್‌ನ ಸುಪ್ರೀಂ ರಾಷ್ಟ್ರೀಯ ಭದ್ರತಾ ಮಂಡಳಿಯು, ದಾಳಿಯ ಕುರಿತಾದ ತನ್ನ ಮೊದಲ ಹೇಳಿಕೆಯಲ್ಲಿ, ಟೆಹ್ರಾನ್ ಮತ್ತು ಇತರ ಕೆಲವು ನಗರಗಳಲ್ಲಿ ದಾಳಿಗಳು ಮುಂದುವರೆಯುವ ನಿರೀಕ್ಷೆಯಿದೆ.

### ಮಿಲಿಟರಿ ನೆಲೆ ಬಳಿ ಸ್ಫೋಟಗಳು

ಮಧ್ಯ ದೋಹಾದಲ್ಲಿ ಮತ್ತು ಈ ಪ್ರದೇಶದ ಅತಿದೊಡ್ಡ ಯುಎಸ್ ಮಿಲಿಟರಿ ಅಲ್-ಉದ್ಯೆದ್ ಮಿಲಿಟರಿ ನೆಲೆ ಬಳಿ ಸ್ಫೋಟಗಳು ಕೇಳಿಬಂದಿವೆ. ಹಲವಾರು ದಾಳಿಗಳನ್ನು ಹಿಮ್ಮೆಟ್ಟಿಸಲಾಗಿದೆ ಎಂದು ಕತಾರ್ ರಕ್ಷಣಾ ಸಚಿವಾಲಯವು ಹೇಳಿಕೆ ನೀಡಿದೆ. ಅಲ್ಲದೆ, ಸೌದಿ ಅರೇಬಿಯಾದ ರಾಜಧಾನಿ ರಿಯಾದ್‌ನಲ್ಲಿಯೂ ಸಹ ಜೋರಾದ ಸ್ಫೋಟಗಳು ಕೇಳಿಬಂದಿವೆ. ಯುನೈಟೆಡ್ ಅರಬ್ ಎಮಿರೇಟ್ಸ್ ಕೂಡ ಇರಾನಿನ ಕ್ಷಿಪಣಿಗಳನ್ನು ತಡೆಹಿಡಿದಿದೆ ಮತ್ತು ದಾಳಿಗಳಿಗೆ ಪ್ರತಿಕ್ರಿಯಿಸುವ ಹಕ್ಕನ್ನು ಕಾಯ್ದಿರಿಸಿದೆ ಎಂದು ಹೇಳಿದೆ. ಕುವೈತ್‌ನಲ್ಲೂ ಕೂಡ ದಾಳಿಗಳು ವರದಿಯಾಗಿವೆ.

# ಕಾಂಗ್ರೆಸ್‌ನಲ್ಲಿ ಪದೇ ಪದೇ ಮುನ್ನೆಲೆಗೆ ಬರುತ್ತಿದೆ ದಲಿತ ನಾಯಕತ್ವ ಚರ್ಚೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಕಾಂಗ್ರೆಸ್ ಭಿನ್ನಮತಕ್ಕೆ ಪೂರ್ಣ ವಿರಾಮ ಬೀಳುವ ಲಕ್ಷಣ ಕಾಣಿಸುತ್ತಿಲ್ಲ. ನಾಯಕತ್ವ ಬದಲಾವಣೆ ವಿಚಾರ ಪದೇ ಪದೇ ಮುನ್ನೆಲೆಗೆ ಬರುತ್ತಿದೆ. ಕುತೂಹಲದ ಸಂಗತಿ ಏನೆಂದರೆ ಯಾವಾಗ ನಾಯಕತ್ವ ಬದಲಾವಣೆ ವಿಚಾರ ಮುನ್ನಲೆಗೆ ಬರುತ್ತದೋ ಅದೇ ಸಂದರ್ಭದಲ್ಲಿ ದಲಿತ ಸಿಎಂ ವಿಚಾರವೂ ಮುನ್ನಲೆಗೆ ಬರುತ್ತಿದೆ. ಅಷ್ಟಕ್ಕೂ ಇದರ ಉದ್ದೇಶ ಏನು ಹಾಗೂ ಇದರಿಂದ ಯಾರಿಗೆ ಲಾಭ ಎಂಬ ಪ್ರಶ್ನೆಯೂ ಕಾಡುತ್ತಿದೆ.

ರಾಜ್ಯದ ಇತಿಹಾಸದಲ್ಲಿ ಕರ್ನಾಟಕ 22 ಮುಖ್ಯಮಂತ್ರಿಗಳನ್ನು ಕಂಡಿದೆ. ಈ ಪೈಕಿ ದೇವರಾಜ ಅರಸ್, ಬಿಎಸ್ ಯಡಿಯೂರಪ್ಪ, ಎಚ್ ಡಿ ಕುಮಾರಸ್ವಾಮಿ ಹಾಗೂ ಸಿದ್ದರಾಮಯ್ಯ ಅವರ ಅವಧಿಗಳು ಪುನರಾವರ್ತಿತವಾಗಿವೆ. ಒಕ್ಕಲಿಕ, ಲಿಂಗಾಯತ, ಬ್ರಾಹ್ಮಣ, ಕುರುಬ, ಈಡಿಗ ಹಾಗೂ ಇತರ ಸಮುದಾಯದಗಳ ವ್ಯಕ್ತಿಗಳು ರಾಜ್ಯದ ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತುಕೊಂಡಿದ್ದಾರೆ. ಆದರೆ ದಲಿತರು ಮತ್ತು ಮುಸ್ಲಿಮರಿಗೆ ಅವಕಾಶ ಸಿಕ್ಕಿಲ್ಲ.

ಹೀಗಿರುವಾಗ ದಲಿತ ಸಿಎಂ ಚರ್ಚೆ ಪದೇ ಪದೇ ಮುನ್ನೆಲೆಗೆ ಬರುತ್ತಿದೆ. ಕಾಂಗ್ರೆಸ್ ಪಕ್ಷದ ಮತ ಬ್ಯಾಂಕ್ ಆಗಿರುವ ದಲಿತರಿಗೆ



**ಕಾಂಗ್ರೆಸ್ ಹೈಕಮಾಂಡ್ ನಡೆ ಏನು**

ಸಿಎಂ ಸ್ಥಾನದ ಅವಕಾಶ ನೀಡಬೇಕು ಎಂಬ ವಿಚಾರ ಚರ್ಚೆಯಲ್ಲಿದೆ. ಆದರೆ, ಅದು ಕೇವಲ ಕೆಲವು ಸಂದರ್ಭದಲ್ಲಿ ಮಾತ್ರ ಚಾಲ್ತಿಗೆ ಬರುತ್ತಿದೆ. ಅದರಲ್ಲೂ ನಾಯಕತ್ವ ಬದಲಾವಣೆ ವಿಚಾರ ಮುನ್ನಲೆಗೆ ಬಂದ ಸಂದರ್ಭದಲ್ಲಿ ದಲಿತ ಸಿಎಂ ವಿಚಾರವೂ ಮುನ್ನೆಲೆಗೆ ಬರುತ್ತಿದೆ. ಈ ಹಿಂದೆ ಸಿಎಂ ಸಿದ್ದರಾಮಯ್ಯ ಅವರ ಅಧಿಕಾರ ಹಸ್ತಾಂತರ ಚರ್ಚೆ ಜೋರಾಗಿತ್ತು. ಆ ಸಂದರ್ಭದಲ್ಲಿ ದಲಿತ ಸಿಎಂ ವಿಚಾರ ಮುನ್ನೆಲೆಗೆ ಬಂತು. ಸಿದ್ದರಾಮಯ್ಯ ಅವರ ಆಪ್ತರೇ ಈ ವಿಚಾರವನ್ನು ಮುನ್ನಲೆಗೆ ತಂದರು. ಅದರಲ್ಲೂ ಪ್ರಮುಖವಾಗಿ ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರ ಹೆಸರು ಕೇಳಿಬರತೊಡಗಿತು. ಪರಮೇಶ್ವರ್ ಕೂಡಾ ನಾನು ಸಿಎಂ ಆಗಲು ಸಿದ್ದ ಎಂಬಂತೆ ತಮ್ಮ ಹೇಳಿಕೆಗಳನ್ನು ನೀಡಲು ಶುರುಮಾಡಿದ್ದರು.

**ರೇಸ್ ನಲ್ಲಿ ಯಾರೆಲ್ಲಾ**

**ಮಲ್ಲಿಕಾರ್ಜುನ ಖರ್ಗೆ:** ದಲಿತ ಸಿಎಂ ವಿಚಾರ ಬಂದಾಗ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಮುನ್ನಲೆಗೆ ಬರುತ್ತದೆ. ಖರ್ಗೆ ಅವರು ಎಐಸಿಸಿ ಅಧ್ಯಕ್ಷರು. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಪ್ರಭಾವಿ ನಾಯಕರು. ಕರ್ನಾಟಕ ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿ ಕೆಲಸ ಮಾಡಿದವರು. ಬಳಿಕ ರಾಷ್ಟ್ರ ರಾಜಕಾರಣದಲ್ಲಿ ಗುರುತಿಸಿಕೊಂಡರು. ಖರ್ಗೆ ಅವರಿಗೆ ಅವಕಾಶ ಇದ್ದರೂ ಅವರನ್ನು ಸಿಎಂ ಆಗಿ ಮಾಡಿಲ್ಲ ಎಂಬ ಆರೋಪ ಇದೆ. ಹಾಗಾಗಿ ದಲಿತ ಸಿಎಂ ಚರ್ಚೆ ಬಂದಾಗ ಖರ್ಗೆ ಅವರ ಹೆಸರು ಮುನ್ನಲೆಗೆ ಬರುತ್ತದೆ.

**ಜಿ ಪರಮೇಶ್ವರ್ :** ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಡಿಸಿಎಂ ಆಗಿ, ಅದಕ್ಕೂ ಮೊದಲು ಕೆಪಿಸಿಸಿ ಅಧ್ಯಕ್ಷರಾಗಿ ಪರಮೇಶ್ವರ್ ಕೆಲಸ ಮಾಡಿದ್ದಾರೆ. ಇದೀಗ ಗೃಹ ಸಚಿವರಾಗಿರು ಪರಮೇಶ್ವರ್ ಹೆಸರು ಸಿಎಂ ಸ್ಥಾನಕ್ಕೆ ಪದೇ ಪದೇ ಕೇಳಿ ಬರುತ್ತಿದೆ. ಹೈಕಮಾಂಡ್ ನಾಯಕರ ಜೊತೆಗೂ ಪರಮೇಶ್ವರ್ ಉತ್ತಮ ಸಂಪರ್ಕದಲ್ಲಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ಜೊತೆಗೂ ಪರಮೇಶ್ವರ್ ಗುರುತಿಸಿಕೊಂಡಿದ್ದಾರೆ. ದಲಿತ ಸಿಎಂ ವಿಚಾರ ಬಂದಾಗ ಸದ್ಯ ಜಿ. ಪರಮೇಶ್ವರ್ ಹೆಸರು ಮುಂಚೂಣಿಯಲ್ಲಿರುತ್ತದೆ.

**ಡಾ. ಎಚ್ ಸಿ ಮಹದೇವಪ್ಪ:** ಮಹದೇವಪ್ಪ ಅವರು ಸಮಾಜಕಲ್ಯಾಣ ಇಲಾಖೆ ಸಚಿವರು. ಸಿಎಂ ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡವರು. ಕಾಂಗ್ರೆಸ್ ಪಕ್ಷದಲ್ಲೂ ಹಿರಿಯ ನಾಯಕತ್ವದ ಅನುಭವ ಹೊಂದಿದವರು. ಎಚ್ ಸಿ ಮಹದೇವಪ್ಪ ಕೂಡಾ ಸಿಎಂ ರೇಸ್‌ನಲ್ಲಿದ್ದಾರೆ. ಆದರೆ ಅವರು ಬಹಿರಂಗವಾಗಿ ನಾನು ಸಿಎಂ ಆಕಾಂಕ್ಷಿ ಎಂದು ಹೇಳಿಕೊಂಡಿಲ್ಲ. ಆದರೆ ರಾಜ್ಯದಲ್ಲಿ ದಲಿತ ಸಮುದಾಯಕ್ಕೆ ಸಿಎಂ ಸ್ಥಾನ ನೀಡಬೇಕು ಎಂದು ಪ್ರತಿಪಾದಿಸುತ್ತಿದ್ದಾರೆ.

**ಕೆ ಎಚ್ ಮುನಿಯಪ್ಪ:** ಆಹಾರ ಮತ್ತು ನಾಗರಿಕ ಪೂರೈಕೆ ಸಚಿವರಾಗಿರುವ ಕೆ ಎಚ್ ಮುನಿಯಪ್ಪ ಅವರ ಹೆಸರು ದಲಿತ ಸಿಎಂ ಚರ್ಚೆಯ ಸಂದರ್ಭದಲ್ಲಿ ಕೇಳಿ ಬರುತ್ತಿದೆ. ಕೆ ಎಚ್ ಮುನಿಯಪ್ಪ ಹಿರಿಯ ನಾಯಕರು. ಹೈಕಮಾಂಡ್ ಮಟ್ಟದಲ್ಲೂ ಸಂಪರ್ಕ ಇದೆ. ಕೇಂದ್ರ ಸಚಿವರಾಗಿಯೂ ಕಾರ್ಯ ನಿರ್ವಹಣೆ ಮಾಡಿದ್ದಾರೆ. ಹಾಗಾಗಿ ಸಿಎಂ ಸ್ಥಾನದ ರೇಸ್ ನಲ್ಲಿ ಅವರೂ ಇದ್ದಾರೆ.

# ನಾಯಕತ್ವ ಗೊಂದಲದ ನಡುವೆಯೂ 17ನೇ ದಾಖಲೆ ಬಜೆಟ್‌ಗೆ ಸಿದ್ದರಾಮಯ್ಯ ಅಂತಿಮ ಟಚ್

## • ಮತ್ತೊಂದು ದಾಖಲೆ ಬಜೆಟ್ ಮಂಡನೆಗೆ ಸಿದ್ಧತೆ • ಮಾರ್ಚ್ 6ರಂದು 17ನೇ ಬಜೆಟ್ ಮಂಡನೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಒಂದು ಕಡೆಯಲ್ಲಿ ನಾಯಕತ್ವ ಬದಲಾವಣೆ ಚರ್ಚೆ ತೀವ್ರ ಸ್ವರೂಪದಲ್ಲಿದೆ. ಈ ನಡುವೆಯೂ ಸಿಎಂ ಸಿದ್ದರಾಮಯ್ಯ ಅವರು ತಮ್ಮ ದಾಖಲೆಯ 17 ನೇ ಬಜೆಟ್ ಮಂಡನೆ ಮಾಡಲು ಅಂತಿಮ ಸಿದ್ದತೆ ನಡೆಸುತ್ತಿದ್ದಾರೆ. ಈಗಾಗಲೇ 16 ಬಜೆಟ್‌ಗಳನ್ನು ಮಂಡನೆ ಮಾಡುವ ಮೂಲಕ ಸಿದ್ದರಾಮಯ್ಯ ದಾಖಲೆ ಸೃಷ್ಟಿಸಿದ್ದರು. ಇದೀಗ ಮತ್ತೊಂದು ಹೆಜ್ಜೆ ಮುಂದಕ್ಕೆ ಹೋಗಿ 17 ನೇ ಬಜೆಟ್ ಮಂಡನೆ ಮಾಡಲಿದ್ದಾರೆ. ಈ ಬಾರಿಯ ಬಜೆಟ್‌ನಲ್ಲಿ ಏನೆಲ್ಲಾ ವಿಶೇಷತೆ ಇರಲಿದೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

**ವಿವಿಧ ಇಲಾಖೆಗಳ ಜೊತೆಗೆ ಪೂರ್ವಭಾವಿ ಸಭೆ:** ಸಿಎಂ ಸಿದ್ದರಾಮಯ್ಯ ಅವರು ಈಗಾಗಲೇ ವಿವಿಧ ಇಲಾಖೆಗಳ ಸಚಿವರು ಹಾಗೂ ಅಧಿಕಾರಿಗಳ ಜೊತೆಗೆ ಬಜೆಟ್ ಪೂರ್ವಭಾವಿ ಸಭೆಯನ್ನು ನಡೆಸಿದ್ದಾರೆ. ಇಂಧನ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಆರೋಗ್ಯ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಗ್ರಾಮೀಣಾಭಿವೃದ್ಧಿ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಭೆಗಳನ್ನು ನಡೆಸಿದ್ದಾರೆ. ಬಜೆಟ್ ಸಂಬಂಧಿಸಿದಂತೆ ವಿವರಗಳನ್ನು ಪಡೆದುಕೊಂಡಿದ್ದಾರೆ. ಡಿಕೆ ಶಿವಕುಮಾರ್ ಅನುಪಸ್ಥಿತಿಯಲ್ಲಿ ಅವರ ಇಲಾಖೆಯ ಸಭೆಯನ್ನು




ಸಿಎಂ ಸಿದ್ದರಾಮಯ್ಯ ಅವರು ನಡೆಸಿದ್ದಾರೆ.

**ರೈತ ಸಂಘಟನೆಗಳ ಜೊತೆಗೂ ಚರ್ಚೆ:** ಬಜೆಟ್ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ರೈತ ಸಂಘಟನೆಗಳ ಮುಖಂಡರು ಮತ್ತು ಕೃಷಿ ಸಂಸ್ಥೆಗಳ ಪ್ರತಿನಿಧಿಗಳ ಜೊತೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯವ್ಯಯ ಪೂರ್ವಭಾವಿ ಸಭೆ ನಡೆಸಿ ಚರ್ಚಿಸಿದರು. ಬಜೆಟ್‌ನಲ್ಲಿ ಕೃಷಿ ಕ್ಷೇತ್ರಕ್ಕೆ ಆದ್ಯತೆ ನೀಡುವಂತೆ ರೈತರು ಕೆಲವೊಂದು ಮನವಿಗಳನ್ನು ಸಿಎಂ ಸಿದ್ದರಾಮಯ್ಯ ಅವರ ಮುಂದೆ ಇಟ್ಟಿದ್ದಾರೆ.

### ಎಸ್‌ಸಿ ಎಸ್‌ಟಿ ಶಾಸಕರ ಜೊತೆಗೂ ಸಭೆ

ಸಿದ್ದರಾಮಯ್ಯ ಅವರು ಆಡಳಿತ ಪಕ್ಷದ ಪರಿಶಿಷ್ಟ ಜಾತಿಯ ಶಾಸಕರುಗಳ ಜೊತೆಗೆ 2026-27ನೇ ಸಾಲಿನ ಆಯವ್ಯಯಯ ಕುರಿತಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಭೆ ನಡೆಸಿ ಚರ್ಚಿಸಿದ್ದಾರೆ. ಈ ಸಂದರ್ಭದಲ್ಲಿ ಕೆಲವೊಂದು ಮಹತ್ವದ ಬೇಡಿಕೆಗಳನ್ನು ದಲಿತ ಶಾಸಕರು ಇಟ್ಟಿದ್ದಾರೆ. ಅದರಲ್ಲೂ ಎಸ್ ಸಿ ಎಸ್ ಪಿ, ಟಿಎಸ್ ಪಿ ಗೆ ಸಂಬಂಧಿಸಿದಂತೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆ ಸೇರಿದಂತೆ ಇತರ ಯೋಜನೆಗಳಿಗೆ ಬಳಕೆ ಮಾಡದಂತೆ ಮನವಿ ಮಾಡಿದ್ದಾರೆ. ಸಿದ್ದರಾಮಯ್ಯ ಅವರು ಇದಕ್ಕೆ ಸ್ಪಂದಿಸಿದ್ದಾರೆ ಎಂಬ ಮಾಹಿತಿ ಇದೆ. ಇನ್ನು ಸಾರಿಗೆ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಜೊತೆಗೂ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಭೆ ನಡೆಸಿ ಚರ್ಚಿಸಿದ್ದಾರೆ. ಸಾರಿಗೆ ಸಂಘ ಸಂಸ್ಥೆಗಳ ಅಹವಾಲುಗಳನ್ನು ಅವರು ಆಲಿಸಿದ್ದಾರೆ. ಅವರ ಬೇಡಿಕೆ ಏನೇನು ಎಂಬ ಬಗ್ಗೆಯೂ ಮಾಹಿತಿಯನ್ನು ಪಡೆದುಕೊಂಡಿದ್ದಾರೆ. ಈ ಸಭೆಯಲ್ಲಿ ಸಚಿವ ರಾಮಲಿಂಗಾರೆಡ್ಡಿ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಇನ್ನು ಈ ಸಂದರ್ಭದಲ್ಲಿ ಸಚಿವರಾದ ಚಲುವರಾಯಸ್ವಾಮಿ, ವೆಂಕಟೇಶ್, ನೀತಿ ಆಯೋಗದ ಉಪಾಧ್ಯಕ್ಷರಾದ ಬಿ.ಆರ್.ಪಾಟೀಲ್, ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಉಪಸ್ಥಿತರಿದ್ದರು.

ಅಷ್ಟೇ ಅಲ್ಲದೆ, ಅಲ್ಪಸಂಖ್ಯಾತ ಸಮುದಾಯದ ಶಾಸಕರುಗಳು ಮತ್ತು ವಿಧಾನ ಪರಿಷತ್ ಸದಸ್ಯರುಗಳ ಜೊತೆ 2026-27ನೇ ಸಾಲಿನ ಬಜೆಟ್ ಪೂರ್ವ ಸಭೆ ನಡೆಸಿದ್ದಾರೆ. ಹಾಗೂ ದಲಿತ, ಕಾರ್ಮಿಕ ಸಂಘಟನೆಗಳ ಮುಖಂಡರುಗಳ ಜೊತೆಗೆ ಚರ್ಚೆ ನಡೆಸಿದ್ದಾರೆ. ಈ ಎಲ್ಲಾ ಸಂಘಟನೆಗಳ ಅಹವಾಲುಗಳನ್ನು ಅವರು ಸ್ವೀಕರಿಸಿದ್ದಾರೆ.

**ವಿಶೇಷ ಕೊಡುಗೆ ಏನಿರಲಿದೆ:** ಸಿಎಂ ಸಿದ್ದರಾಮಯ್ಯ ಅವರಿಗೆ ಈ ಬಾರಿಯ ಬಜೆಟ್ ಕೂಡಾ ಸಾಕಷ್ಟು ಮಹತ್ವದ್ದಾಗಿದೆ. ಬಜೆಟ್ ಬಳಿಕ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಸಾಧ್ಯತೆಗಳ ಬಗ್ಗೆ ಚರ್ಚೆ ಆಗುತ್ತಿದೆ. ದೆಹಲಿಯಲ್ಲೂ ಸಾಕಷ್ಟು ಬೆಳವಣಿಗೆಗಳು ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ಈ ಬಾರಿಯ ಬಜೆಟ್ ನಲ್ಲಿ ಸಿದ್ದರಾಮಯ್ಯ ಗಮನ ಸೆಳೆಯುವ ವಿಶೇಷ ಕೊಡುಗೆಗಳನ್ನು ಘೋಷಣೆ ಮಾಡುತ್ತಾರಾ ಎಂಬ ಕುತೂಹಲವೂ ಕೆರಳಿಸಿದೆ.

ಮಾರ್ಚ್ 6 ರಂದು ಬಜೆಟ್ ಮಂಡನೆ ಮಾಡಲಿದ್ದಾರೆ. ಈ ಬಗ್ಗೆ ಸಿದ್ದರಾಮಯ್ಯ ಅವರು ಅಧಿಕೃತವಾಗಿ ಘೋಷಣೆ ಮಾಡಿದ್ದಾರೆ. ಹಾಗಾಗಿ ಬಜೆಟ್ ಸಂದರ್ಭದಲ್ಲಿ ವಿಪಕ್ಷಗಳ ನಡೆ ಏನು ಎಂಬುವುದು ಕೂಡಾ ಸಾಕಷ್ಟು ಕುತೂಹಲವನ್ನು ಕೆರಳಿಸಿದೆ.

**ಈ ದಿನದ ದರ** | ಪೆಟ್ರೋಲ್: 102.92 ₹/L | ಡೀಸೆಲ್ : 91.52 ₹/L | ಬಂಗಾರ: ₹16,871/Gram24ct ₹15,465/Gram22ct | ಬೆಳ್ಳಿ: ₹295.00/Gram

# ಅಭ್ಯರ್ಥಿಗಳಿಗೆ ಲೋಕಸಭಾ ಸದಸ್ಯರಿಂದ ನೇಮಕಾತಿ ಪತ್ರ ವಿತರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಾಮರಾಜನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಂಜೀವಿನಿ-ಕರ್ನಾಟಕ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ, ಇನ್ನಿತರ ಇಲಾಖೆ, ನಿಗಮ ಆಶ್ರಯದಲ್ಲಿ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಜಿಲ್ಲಾ ಕೇಂದ್ರದಲ್ಲಿ ಶನಿವಾರ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಉದ್ಯೋಗ ಮೇಳದಲ್ಲಿ ಉದ್ಯೋಗಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಲೋಕಸಭಾ ಸದಸ್ಯ ಸುನೀಲ್ ಬೋಸ್ ಅವರು ಉದ್ಯೋಗ ನೇಮಕಾತಿ ಪತ್ರ ವಿತರಿಸಿದರು. ಶನಿವಾರ ನಡೆದ ಉದ್ಯೋಗ ಮೇಳಕ್ಕೆ ಆನ್ ಲೈನ್ ನಲ್ಲಿ 668, ಆಫ್ ಲೈನ್ ನಲ್ಲಿ 602 ಅಭ್ಯರ್ಥಿಗಳು ಸೇರಿದಂತೆ ಒಟ್ಟು 1290 ಅಭ್ಯರ್ಥಿಗಳು ನೊಂದಣಿಯಾಗಿದ್ದರು. ಇವರಲ್ಲಿ 495 ಪುರುಷರು, 790 ಮಹಿಳೆಯರು ಸೇರಿದ್ದಾರೆ. ಉದ್ಯೋಗ ಮೇಳದಲ್ಲಿ 101 ಉದ್ಯೋಗದಾತ ಕಂಪನಿಗಳು ಭಾಗವಹಿಸಿದ್ದವು. 85 ಪುರುಷರು, 108 ಮಹಿಳೆಯರು ಸೇರಿದಂತೆ ಒಟ್ಟು 193 ಅಭ್ಯರ್ಥಿಗಳು ಸ್ಥಳದಲ್ಲಿಯೇ ಉದ್ಯೋಗಕ್ಕೆ ಆಯ್ಕೆಯಾಗಿದ್ದಾರೆ. 190 ಪುರುಷರು, 290 ಮಹಿಳೆಯರು ಸೇರಿದಂತೆ ಒಟ್ಟು 480 ಅಭ್ಯರ್ಥಿಗಳು ಉದ್ಯೋಗಕ್ಕಾಗಿ 2ನೇ ಹಂತದ ಸಂದರ್ಶನಕ್ಕೆ ಆಯ್ಕೆಯಾಗಿದ್ದಾರೆ.


ಶನಿವಾರ ಬೆಳಿಗ್ಗೆ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಉದ್ಯೋಗ ಮೇಳವನ್ನು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ವಿ. ಚಂದ್ರು ಅವರು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು ಸ್ಥಳೀಯ ನಿರುದ್ಯೋಗಿ ಯುವಜನರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕೆಂಬ ಉದ್ದೇಶದಿಂದ ಆಯೋಜಿಸಲಾಗುವ ಉದ್ಯೋಗ ಮೇಳ ದಂತಹ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಪ್ರತಿಯೊಬ್ಬರು ಸರ್ಕಾರಿ ಉದ್ಯೋಗ ಪಡೆಯಲು ಸಾಧ್ಯವಾಗುವುದಿಲ್ಲ, ಖಾಸಗಿ ಕ್ಷೇತ್ರಗಳಲ್ಲೂ ಸಾಕಷ್ಟು ಉತ್ತಮ ಉದ್ಯೋಗಗಳು ಇವೆ. ಅರ್ಹತೆ ಕೌಶಲ್ಯಗಳಿಗನುಗುಣವಾಗಿ ಉದ್ಯೋಗ ಪಡೆಯಲು ನೆರವಾಗಬೇಕೆಂಬ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಇನ್ನಿತರ ಇಲಾಖೆಗಳು ಸ್ಥಳೀಯವಾಗಿ ಉದ್ಯೋಗ ಮೇಳವನ್ನು ಏರ್ಪಡಿಸುತ್ತಿವೆ. ಅಂದಿನ ಉದ್ಯೋಗ ಮೇಳದಲ್ಲಿ 500ಕ್ಕೂ ಹೆಚ್ಚು ಜನರಿಗೆ ಉದ್ಯೋಗ ಲಭಿಸಿತ್ತು. ಈ ಬಾರಿ 100ಕ್ಕೂ ಹೆಚ್ಚು ಕಂಪನಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಂಡಿವೆ. ಕಳೆದ ಬಾರಿಗಿಂತಲೂ ಹೆಚ್ಚು ಅಭ್ಯರ್ಥಿಗಳಿಗೆ ಉದ್ಯೋಗ ಪಡೆಯಲು ಎಲ್ಲಾ ಅನುಕೂಲಗಳನ್ನು ಕಲ್ಪಿಸಲಾಗಿದೆ ಎಂದರು.

### ಮಾರ್ಚ್ 5ರಂದು ಬೃಹತ್ ಉದ್ಯೋಗ ಮೇಳ ಶಾಸಕ ಇಕ್ಬಾಲ್ ಹುಸೇನ್

# ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಭಾಗವಹಿಸಿ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಮಾರ್ಚ್ 5ರ ಗುರುವಾರ ರಾಮನಗರದ ಸರ್ಕಾರಿ ಪದವಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದು, ವ್ಯಾಪಕ ಪ್ರಚಾರ ನೀಡಿ ಹೆಚ್ಚಿನ ಸಂಖ್ಯೆಯ ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಭಾಗವಹಿಸಿ ಉದ್ಯೋಗ ಪಡೆದುಕೊಳ್ಳಲು ಸಂಬಂಧಿಸಿದ ಇಲಾಖೆಗಳು ಸಹಕಾರ ನೀಡಬೇಕೆಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ಅವರು ನಿರ್ದೇಶನ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಈ ಕುರಿತಂತೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

**171 ಕಂಪನಿಗಳು ನೋಂದಣಿ**

ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ ಉದ್ಯೋಗ ಮೇಳ ಉತ್ತಮ ವೇದಿಕೆಯಾಗಿದೆ. ಯಶಸ್ಸಿಗೆ ಸಂಬಂಧಿಸಿದ ಇಲಾಖೆಗಳು ಶ್ರಮಿಸಬೇಕು. ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ತೆರಳಿ ಉದ್ಯೋಗ ಮೇಳದ ಮಾಹಿತಿ, ಪೋಸ್ಟರ್ ತಲುಪಿಸಬೇಕು ಎಂದು ಹೇಳಿದರು. ಈ ಉದ್ಯೋಗ ಮೇಳಕ್ಕೆ ಈಗಾಗಲೇ ಜಿಲ್ಲೆಯಲ್ಲಿ 171 ಕಂಪನಿಗಳು ನೋಂದಣಿಯಾಗಿವೆ, ಈ ಕಂಪನಿಗಳ ಸಂಖ್ಯೆಯನ್ನು ಹೆಚ್ಚಿಸಲು ಮತ್ತಷ್ಟು ಕ್ರಮ ಕೈಗೊಳ್ಳಲಾಗುತ್ತಿದೆ, ಮೇಳದಲ್ಲಿ ಭಾಗವಹಿಸುವ ಕಂಪನಿಗಳ ಅನುಕೂಲಕ್ಕಾಗಿ ಕಾಲೇಜು ಆವರಣ, ಮೈದಾನದಲ್ಲಿ 200 ಮಳಿಗೆಗಳನ್ನು ತೆರೆಯಲಾಗುವುದು, ಉದ್ಯೋಗಾಕಾಂಕ್ಷಿಗಳ ನೆರವಿಗಾಗಿ ಅಗತ್ಯ ಸಂಖ್ಯೆಯ ಹೆಲ್ಪ್ ಡೆಸ್ಕ್‌ಗಳನ್ನು ತೆರೆಯಲಾಗುವುದು, ಈ ಕೆಲಸದಲ್ಲಿ ಆಸಕ್ತಿ ಇರುವವರನ್ನು ಮಾತ್ರ ಅಲ್ಲಿ ನಿಯೋಜಿಸಬೇಕು. ಕೆಲಸ ಕೇಳಿಕೊಂಡು ಬಂದ ಆಕಾಂಕ್ಷಿಗಳಿಗೆ ಉತ್ತಮ ಮಾಹಿತಿ ಒದಗಿಸಬೇಕು. ಅದೇ ರೀತಿ ಶೌಚಾಲಯಗಳು, ಬೇಸಿಗೆ ಕಾಲವಾಗಿರುವುದರಿಂದ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಬೇಕು.

ಬೆಳಗಿನ ಉಪಹಾರ, ಮಧ್ಯಾಹ್ನ ಭೋಜನದ ವ್ಯವಸ್ಥೆ ಮಾಡಲಾಗುವುದು. ರಾಮನಗರ ನಗರ ಸಭೆಯಿಂದ ಸ್ವಚ್ಛತಾ ಕಾರ್ಯ ಕೈಗೊಳ್ಳುವಂತೆ ತಿಳಿಸಿದ ಅವರು, ಉದ್ಯೋಗ ಮೇಳ ನಡೆಯುವ ಆವರಣದ ಮಧ್ಯದಲ್ಲಿ ಸಣ್ಣ ವೇದಿಕೆಯೊಂದನ್ನು ನಿರ್ಮಿಸಬೇಕು ಅಲ್ಲಿ ಉದ್ಯೋಗಾ ಆಕಾಂಕ್ಷಿಗಳು, ಕಂಪನಿ ಅವರು ಅಭಿಪ್ರಾಯಗಳನ್ನು ಹೇಳಿಕೊಳ್ಳಲು ಅನುಕೂಲವಾಗಲಿದೆ. ಆರೋಗ್ಯ ಇಲಾಖೆಯಿಂದ ಸ್ಥಳದಲ್ಲಿ ಎರಡು ಆಂಬುಲೆನ್ಸ್ ವ್ಯವಸ್ಥೆ ಮಾಡಬೇಕು. ಸಂಜೆಗೆ ಲೈಟಿಂಗ್ ವ್ಯವಸ್ಥೆ, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲು ಆಸನಗಳು, ಟೇಬಲ್‌ಗಳ ವ್ಯವಸ್ಥೆ ಮಾಡಲಾಗುವುದು ಮೇಳದಲ್ಲಿ ನೇರವಾಗಿ ನೇಮಕ ಮಾಡಿಕೊಳ್ಳಬೇಕೆಂದು ಉದ್ಯೋಗಾಸಕ್ತ ಕಂಪನಿಗಳಿಗೆ ಮನವಿ ಮಾಡಲಾಗಿದೆ.

ಜಿಲ್ಲೆಯಲ್ಲಿರುವ ಎಲ್ಲಾ ಕೈಗಾರಿಕೆಗಳು ಈ ಮೇಳದಲ್ಲಿ ಭಾಗವಹಿಸಿ ಸ್ಟಾಲ್ ಹಾಕಬೇಕೆಂದು ಕೋರಲಾಗಿದೆ ಎಂದವರು ಹೇಳಿದರು. ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಕೆ. ರಾಜು ಅವರು ಮಾತನಾಡಿದರು. ಸಂಬಂಧಪಟ್ಟ ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

**ಸಾರಿಗೆ ವ್ಯವಸ್ಥೆ ಮಾಡಿಕೊಳ್ಳುವಂತೆ ಸೂಚನೆ**

**ಉದ್ಯೋಗ ಮೇಳದಲ್ಲಿ ಭಾಗವಹಿಸುವ ಉದ್ಯೋಗಾಕಾಂಕ್ಷಿಗಳನ್ನು ಗ್ರಾಮಮಟ್ಟದಿಂದ ಕರೆತರಲು ಅವಕಾಶವಿದ್ದಲ್ಲಿ ಸಾರಿಗೆ ವ್ಯವಸ್ಥೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಅನ್ಮೋಲ್ ಜೈನ್ ಅವರು ಮಾತನಾಡಿ, ಜಿಲ್ಲೆಯಲ್ಲಿ 4,707 ಅಭ್ಯರ್ಥಿಗಳು ಇದೂವರಗೂ ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡಿದ್ದಾರೆ, ಅವರೆಲ್ಲರೂ ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆ ಸಂಬಂಧಪಟ್ಟ ಇಲಾಖೆಯವರು ಸೂಚಿಸುವಂತೆ ತಿಳಿಸಿದರು.**

**ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾ ಅಧಿಕಾರಿಗಳು ಪಂಚಾಯತ್ ಮಟ್ಟದಲ್ಲಿ ಆಟೋ ಸೇರಿದಂತೆ ವಿವಿಧ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಪ್ರತಿ ಮನೆ ಮನೆಗೂ ಈ ಕುರಿತ ಪೋಸ್ಟರ್ ತಲುಪಿಸುವ ವ್ಯವಸ್ಥೆ ಮಾಡಬೇಕು. ಜಿಲ್ಲೆಯ ಎಲ್ಲಾ ಕಾಲೇಜುಗಳಲ್ಲೂ ಈ ಕುರಿತಂತೆ ಪ್ರಚಾರ ನೀಡಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿ, ನೋಂದಾಯಿಸಿಕೊಳ್ಳುವಂತೆ ಮನವೊಲಿಸಬೇಕು. ಶಿಕ್ಷಣ ಇಲಾಖೆ ಅಧಿಕಾರಿಗಳು ಈ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು.**
**–ಎಚ್.ಎ. ಇಕ್ಬಾಲ್ ಹುಸೇನ್, ಶಾಸಕ**

## ಮಿನಿ ನ್ಯೂಸ್

# ರಾಷ್ಟ್ರೀಯ ವಿಜ್ಞಾನ ದಿನಾಚರಣೆ

• ಉದಯವಾಹಿನಿ, ಕನಕಪುರ

ದಿ ರೂರಲ್ ಕಾಲೇಜ್ ಶಿಕ್ಷಣ ಸಂಸ್ಥೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅಮೇರಿಕದ SIUE ಯೂನಿವರ್ಸಿಟಿ ಇಂದ ಪ್ರಖ್ಯಾತ ಪ್ರೊಫೆಸರ್ ಡಾ. ಛಾಯಾ ಗೋಪಾಲನ್ ಆಗಮಿಸಿದ್ದರು. ಸಂಸ್ಥೆಯ ಅಧ್ಯಕ್ಷರಾದ ಶ್ರೀಕಂಠ ಸರ್ ಅವರ ಘನ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಜರುಗಿತು. ಡಾ. ಛಾಯಾ ಅವರು ಮಾತನಾಡಿ, ವಿಜ್ಞಾನವು ಕೇವಲ ಪುಸ್ತಕದ ವಿಷಯವಲ್ಲ, ಅದು ನಿರಂತರ ಪ್ರಶ್ನಿಸುವ ಮನೋಭಾವ, ಎಂದು ವಿದ್ಯಾರ್ಥಿಗಳಲ್ಲಿ ಸ್ಫೂರ್ತಿ ತುಂಬಿದರು. ಅಧ್ಯಕ್ಷೀಯ ನುಡಿಗಳನ್ನಾಡಿದ ಶ್ರೀಕಂಠ ಸರ್ ಅವರು, ಆಧುನಿಕ ಜಗತ್ತಿನಲ್ಲಿ ತಂತ್ರಜ್ಞಾನದ ಸದ್ಬಳಕೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.


ಉದಯವಾಹಿನಿ ಚಿತ್ರ

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಯಾರಿಸಿದ ವಿಜ್ಞಾನ ಮಾದರಿಗಳ ಪ್ರದರ್ಶನ ಗಮನ ಸೆಳೆಯಿತು. ಈ ವಿಜ್ಞಾನ ಮಾದರಿಯ ಪ್ರದರ್ಶನದಲ್ಲಿ ಸಸ್ಯಶಾಸ್ತ್ರ ವಿಭಾಗದ ಮಾದರಿ ಪ್ರಥಮ ಸ್ಥಾನ ಹಾಗೂ ಭೂಗೋಳಶಾಸ್ತ್ರ ವಿಭಾಗ ದ್ವಿತೀಯ ಸ್ಥಾನವನ್ನು ಪಡೆಯಿತು ವಿಜೇತರಿಗೆ ಗಣ್ಯರು ಬಹುಮಾನ ವಿತರಿಸಿದರು. ವಿಜ್ಞಾನದ ಮಹತ್ವ ಸಾರುವ ಘೋಷಣೆಗಳೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ಮುಕ್ತಾಯಗೊಂಡಿತು.

# ಸೋಲಾರ್ ವಿದ್ಯುತ್ ಕಂಬ ಅಳವಡಿಕೆ; ರೈತರ ಆಕ್ರೋಶ

• ಉದಯವಾಹಿನಿ, ಚನ್ನಪಟ್ಟಣ


ಖಾಸಗಿ ಕಂಪನಿಯೊಂದು ರೈತರ ಕೃಷಿ ಭೂಮಿಯಲ್ಲಿ ಸೋಲಾರ್ ವಿದ್ಯುತ್ ಕಂಬಗಳನ್ನು ಅಳವಡಿಸುತ್ತಿರುವುದನ್ನು ವಿರೋಧಿಸಿ ತಾಲ್ಲೂಕಿನ ಮಂಕುಂದ ಗ್ರಾಮದ ರೈತರು ಆಕ್ರೋಶ ವ್ಯಕ್ತಪಡಿಸಿದರು ಯಾವುದೇ ಕಾನೂನಾತ್ಮಕ ಭೂಸ್ವಾಧೀನ ಪ್ರಕ್ರಿಯೆ ನಡೆಸದೆ, ರೈತರ ಅನುಮತಿ ಪಡೆಯದೆ ಕೃಷಿ ಭೂಮಿಯಲ್ಲಿ ಸೋಲಾರ್ ವಿದ್ಯುತ್ ಕಂಬಗಳನ್ನು ಅಕ್ರಮವಾಗಿ ಅಳವಡಿಸಲಾಗುತ್ತಿದೆ ಎಂದು ಆರೋಪಿಸಿ ಸ್ಥಳದಲ್ಲಿ ಜಮಾಯಿಸಿದ ಗ್ರಾಮದ ರೈತರು, ಕಾಮಗಾರಿಯನ್ನು ತಡೆದು ಸೋಲಾರ್ ವಿದ್ಯುತ್ ಕಂಬಗಳನ್ನು ನೆಡುತ್ತಿದ್ದ ಕಂಪನಿ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ಕಾಮಗಾರಿ ನಡೆಸಲು ಸರ್ಕಾರದಿಂದ ಪಡೆದಿರುವ ಆದೇಶ ಪ್ರತಿ ತೋರಿಸಿ ಎಂದು ಪಟ್ಟು ಹಿಡಿದರು. ಆದರೆ ಕಂಪನಿಯ ಸಿಬ್ಬಂದಿ ಯಾವುದೇ ದಾಖಲೆ ನೀಡಲು ವಿಫಲರಾದರು. ಆನಂತರ ರೈತರ ಆಕ್ರೋಶ ತೀವ್ರಗೊಂಡ ಕಾರಣ ಸಿಬ್ಬಂದಿ ಸ್ಥಳದಿಂದ ಕಾಲ್ಕಿತ್ತರು. ತಾಲ್ಲೂಕಿನ ಗುಡ್ಡೆ ತಿಮ್ಮಸಂದ್ರ ಗ್ರಾಮದಿಂದ ಬೈರಾಪಟ್ಟಣ ಗ್ರಾಮದವರೆಗೆ ಮೆಗಾ ಫರ್ಸ್ ಖಾಸಗಿ ಕಂಪನಿ ಸೋಲಾರ್ ವಿದ್ಯುತ್ ಮಾರ್ಗಕ್ಕಾಗಿ ಕಂಬಗಳನ್ನು ಅಳವಡಿಸುತ್ತಿದೆ. ಈ ಪ್ರಕ್ರಿಯೆಯಲ್ಲಿ ರೈತರ ಜಮೀನಿನ ಮಧ್ಯೆ ಕಂಬಗಳನ್ನು ನೆಡುವುದರಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆಯಾಗಲಿದೆ ಎಂದು ರೈತರು ತಿಳಿಸಿದರು.

ಈ ಬಗ್ಗೆ ತಾಲ್ಲೂಕಿನ ಎಂ.ಕೆ.ದೊಡ್ಡಿ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಕಂದಾಯ ಇಲಾಖೆ, ಬೆಸ್ಕಾಂ ಇಲಾಖೆಗೆ ವಿಚಾರ ತಿಳಿಸಲಾಗಿದೆ. ಆದರೆ ರೈತರ ಅಹವಾಲು ಕೇಳಲು ಯಾರೂ ಸ್ಥಳಕ್ಕೆ ಬಂದಿಲ್ಲ ಎಂದು ರೈತರು ಆರೋಪಿಸಿದರು. ತಾಲ್ಲೂಕು ಆಡಳಿತ ಕೂಡಲೇ ಗಮನಹರಿಸಿ ಈ ಅಕ್ರಮಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

# ಸದ್ಯದ ರಾಜಕೀಯ ಬೆಳವಣಿಗೆ ನೋಡಿ ವೈರಾಗ್ಯ ಆವರಿಸುತ್ತಿದೆ: ಎಚ್ ಡಿಕೆ

• ಉದಯವಾಹಿನಿ, ಶ್ರೀರಂಗಪಟ್ಟಣ

ಸದ್ಯದ ರಾಜಕೀಯ ಬೆಳವಣಿಗೆ ನೋಡಿ ನನಗೆ ವೈರಾಗ್ಯ ಆವರಿಸುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು. ತಾಲ್ಲೂಕಿನ ಪಾಲಹಳ್ಳಿ ಗ್ರಾಮದಲ್ಲಿ ಜೀರ್ಣೋದ್ಧಾರ ಮಾಡಿರುವ ತಿರುಮಲ ವೆಂಕಟರಮಣಸ್ವಾಮಿ ದೇವಾಲಯ, ಸಮುದಾಯ ಭವನ ಉದ್ಘಾಟನಾ ಸಮಾರಂಭದಲ್ಲಿ ಶನಿವಾರ ಅವರು ಮಾತನಾಡಿದರು. ಐದು ಬಾರಿ ಸಾವಿನ ಮನೆಯ ಕದ ತಟ್ಟಿ ಬಂದಿದ್ದೇನೆ. ದೇವರ ಕೃಪೆಯಿಂದ ಬದುಕಿ ಉಳಿದಿದ್ದೇನೆ.




ರಾಜ್ಯ ಸರ್ಕಾರ ಜನರ ಹಣವನ್ನು ಲೂಟಿ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಜನರ ಜೇಬಿಗೆ ಕತ್ತರಿ ಹಾಕುತ್ತಿದೆ. ಮದ್ಯ, ವಿದ್ಯುತ್ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಿದೆ ಎಂದು ಟೀಕಿಸಿದರು.

ಐದು ವರ್ಷ ಸರ್ಕಾರ ನಡೆಸಲು, ರಾಜ್ಯದ ಜನರು ಅವಕಾಶ ನೀಡಿದರೆ ಕರ್ನಾಟಕವನ್ನು ದೇಶದಲ್ಲೇ ಮಾದರಿ ರಾಜ್ಯ ಮಾಡುತ್ತೇನೆ ಎಂದರು.

# ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ಸಿಗದೆ ರೈತ ಆತ್ಮಹತ್ಯೆ

• ಉದಯವಾಹಿನಿ, ಪಿರಿಯಾಪಟ್ಟಣ

ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ಸಿಗದೆ ರೈತನೊಬ್ಬ ಆತ್ಮ ಹತ್ಯೆ ಮಾಡಿಕೊಂಡಿರುವ ಘಟನೆ ತಾಲ್ಲೂಕಿನಲ್ಲಿ ಜರುಗಿದೆ. ತಾಲ್ಲೂಕಿನ ರಾಮನಾಥ ತುಂಗ ಗ್ರಾಮದ ಎ.ಜಿ ಕೊಪ್ಪಲಿನ ನಿವಾಸಿ ಸಿದ್ದೇಗೌಡ (45) ರವರು ಅವರ ತಮ್ಮ ಸಿದ್ದರಾಮೇಗೌಡ ತಾಯಿ ನಾಗಮ್ಮ ರವರ ಜಂಟೀ ಖಾತೆಯಲ್ಲಿರುವ ಸರ್ವೇ ನಂ 62/2 ರಲ್ಲಿ 1.3 ಗುಂಟೆ ಜಮೀನಿನಲ್ಲಿ ಹೊಗೆ ಸೊಪ್ಪು, ಶುಂಠಿ ಬೆಳೆಗಳನ್ನು ಬೆಳೆಯುತ್ತಿರುತ್ತಾರೆ, ಬೇರೆಯವರಿಂದ ಜಮೀನನ್ನು ಗುತ್ತಿಗೆ ಪಡೆದು ವ್ಯವಸಾಯ ಮಾಡುತ್ತಿರುತ್ತಾರೆ.



ಈಗೆ ಸುಮಾರು 3 ವರ್ಷದಿಂದ ಬೆಳೆ ಬೆಳೆಯಲು 3 ಲಕ್ಷ ರೈತರಿಂದ ಕೈಸಾಲ, ಕಾವೇರಿ ಗ್ರಾಮೀಣ ಬ್ಯಾಂಕಿನಲಿ 4 ಲಕ್ಷ, ಧರ್ಮಸ್ಥಳ ಸಂಘದಿಂದ 2.5 ಲಕ್ಷ, ಎಲ್.ಎನ್.ಟಿ ಫೈನಾನ್ಸ್ ನಲ್ಲಿ 50 ಸಾವಿರ, ಬಿ.ಎಸ್.ಎಸ್ ಮೈಕ್ರೋ ಫೈನಾನ್ಸ್ 70 ಸಾವಿರ, ಗೂಡ್ಸ್ ಆಟೋದ ಮೇಲೆ 2.50 ಲಕ್ಷ ಸಾಲ ಪಡೆದು ಕೊಂಡು ವ್ಯವಸಾಯ ಮಾಡಿದ್ದು ಬೆಳೆಗೆ ಸೂಕ್ತ ಬೆಲೆ ಸಿಗದೆ ಪ್ರತಿ ವರ್ಷ ಸಾಲ ತೀರಿಸಲು ಸಾಧ್ಯವಾಗದೆ ಸಾಲದ ಹೊರೆ ಜಾಸ್ತಿ ಆಗಿದೆ ಎಂದ ಸಂಬಂಧಿಕರ ಜೊತೆ ಹೇಳಿಕೊಂಡು ಬೇಸರ ವ್ಯಕ್ತ ಪಡಿಸುತ್ತಿದ್ದರು ಅಲ್ಲದೆ ಈತನನ್ನು ಸಮಧಾನ ಮಾಡಿ ಸಾಲವನ್ನು ತೀರಿಸುವ ಬಗ್ಗೆ ಧೈರ್ಯ ಹೇಳುತ್ತಿದ್ದರು ಆದರೂ ಕೂಡ ಸಿದ್ದೇಗೌಡನು ಫೆ. 27 ರಂದು ಬೆಳಗ್ಗೆ ಜಮೀನನ ಬಳಿ ಮೃತಪಟ್ಟಿರುತ್ತಾರೆ ಎಂದು ನಮ್ಮ ತಾಯಿ ಸರೀತಾರವರಿಗೆ ತಿಳಿಸಿರುತ್ತಾರೆ, ಕೂಡಲೇ ನನಗೆ ವಿಚಾರ ತಿಳಿಸಿ ನಾನು, ತಮ್ಮ ಪುಟ್ಟರಾಜು ಜಮೀನ ಬಳಿ ಹೋಗಿ ನೋಡಲಾಗಿ ನಮ್ಮ ತಂದೆ ಮೃತಪಟ್ಟಿದ್ದು ಅವರ ಜೋಬಿನಲ್ಲಿ ಜೋಳಕ್ಕೆ ಹಾಕುವ ಕಾಳಿನ ಮಾತ್ರೆಯಿದ್ದು ಇದನ್ನು ಕುಡಿದಿರುವುದಾಗಿ, ನನ್ನ ತಂದೆ ವ್ಯವಸಾಯಕ್ಕೆ ಮಾಡಿದ ಸಾಲವನ್ನು ತೀರಿಸಲಾಗದೇ, ಜೋಳಕ್ಕೆ ಹಾಕುವ ಕಾಳಿನ ಮಾತ್ರೆಯನ್ನು ಕುಡಿದು ಮೃತಪಟ್ಟಿರುತ್ತಾರೆ ಎಂದು ಈತನ ಪುತ್ರ ಅಪ್ಪು ಪೊಲೀಸ್ ಠಾಣೆಗೆ ದೂರು ನೀಡಿದ್ದು. ಮೃತ ವ್ಯಕ್ತಿಯ ಶವವನ್ನು ಮರಣೋತ್ತರ ಪರೀಕ್ಷೆ ನಡೆಸಿ ಸಂಬಂಧಿಕರಿಗೆ ನೀಡಲಾಯಿತು.

ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ. ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಆರ್.ಎಸ್. ಮಹದೇವ್ ಮಾತನಾಡಿ ತಂಬಾಕು ಬೆಳಗೆ ಸೂಕ್ತ ಬೆಂಬಲ ಬೆಲೆ ಸಿಗದೆ ಸಾಕಷ್ಟು ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ.

ತಾಲ್ಲೂಕಿನಲ್ಲಿ ತಂಬಾಕು ಮಾರುಕಟ್ಟೆ ಕೂಡ ಬೆಲೆ ಕುಸಿತದಿಂದಾಗಿ ಮುಚ್ಚಲ್ಪಟ್ಟಿದ್ದು ಇದರಿಂದಾಗಿ ತಂಬಾಕು ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇದನ್ನು ಇಲಾಖೆ ಮತ್ತು ಕೇಂದ್ರ, ರಾಜ್ಯ ಸರ್ಕಾರಗಳು ಗಂಭೀರವಾಗಿ ಪರಿಗಣಿಸಿ ತಂಬಾಕು ಬೆಳೆಗೆ ಸೂಕ್ತ ಪರಿಹಾರವನ್ನು ನೀಡಬೇಕು ಇಲ್ಲದಿದ್ದಲ್ಲಿ ಸಾರ್ವಜನಿಕರು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಖಾಲಿ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ, ಮೈಸೂರು

ಕೇಂದ್ರ, ರಾಜ್ಯ ಸರ್ಕಾರಗಳು ತಮ್ಮ ತಮ್ಮ ವ್ಯಾಪ್ತಿಯ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿ ಎಐಡಿವೈಒ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಮೈಸೂರಿನ ಚಿಕ್ಕಗಡಿಯಾರದ ಎದುರು ಜಮಾವಣೆಗೊಂಡ ನೂರಾರು ಮಂದಿ, ಕೇಂದ್ರ, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದರೂ ನೇಮಕಾತಿ ಮಾಡುತ್ತಿಲ್ಲ ಎಂದು ಆಕ್ರೋಶ ಹೊರಹಾಕಿದರು.



ಉದಯವಾಹಿನಿ ಚಿತ್ರ

ನಿರಂತರ ಹೋರಾಟದ ಫಲವಾಗಿ ಮುಖ್ಯಮಂತ್ರಿಗಳು ಕಳೆದ ಡಿಸೆಂಬರ್‌ನಲ್ಲಿ 56,432 ಹುದ್ದೆಗಳ ಭರ್ತಿಗೆ ಹಾಗೂ ಬೆಳಗಾವಿ ಅಧಿವೇಶನದಲ್ಲಿ 24,300 ಹುದ್ದೆಗಳ ನೇಮಕಾತಿಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ದೊರೆತಿದೆ ಎಂದು ಘೋಷಿಸಿದ್ದರು. ಆದರೆ, ಘೋಷಣೆಯಾಗಿ ಹಲವು ತಿಂಗಳು ಕಳೆದರೂ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈಗ ಮತ್ತೆ ಸಂಪುಟ ಸಭೆಯಲ್ಲಿ 56,000 ಹುದ್ದೆಗಳ ನೇಮಕಾತಿಗೆ ಅನುಮೋದನೆ ದೊರೆತಿದೆ ಎಂದು ಸರ್ಕಾರ ಹೇಳುತ್ತಿದೆ. ಆದರೆ, ಇದು ಕೇವಲ ಬಾಯಿ ಮಾತಾಗದೇ ಕೂಡಲೇ ನೇಮಕಾತಿ ಅಧಿಸೂಚನೆ ಹೊರಡಿಸಬೇಕು. ಜೊತೆಗೆ ಖಾಲಿ ಇರುವ ಎಲ್ಲಾ 2,84,881 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ಭ್ರಷ್ಟಾಚಾರ ನಿಲ್ಲಿಸಿ**

**ನೇಮಕಾತಿಯಲ್ಲಿ ಪಾರದರ್ಶಕತೆ ಕಾಪಾಡಬೇಕು. ಭ್ರಷ್ಟಾಚಾರ ಇರಬಾರದು. ನೇಮಕಾತಿಯ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಬೇಕು. ಅರ್ಜಿ ಶುಲ್ಕ ಕಡಿತ ಮಾಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ಉದ್ಯೋಗಗಳನ್ನು ನಾಶ ಮಾಡುವ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಯೋಜನೆ ಕೈ ಬಿಡಬೇಕು ಎಂದು ಆಗ್ರಹಿಸಿದರು.**

# ಸರ್ಕಾರಿ ಶಾಲೆಗಳು ಬಲವರ್ಧನೆಯಾಗಬೇಕು: ಮಂಜು

• ಉದಯವಾಹಿನಿ, ಕೆ.ಆರ್.ಪೇಟೆ


ಉದಯವಾಹಿನಿ ಚಿತ್ರ

ಮುಚ್ಚಿದ್ದ ಶಾಲೆಯನ್ನು ಆರಂಭಿಸಿ ಮಕ್ಕಳನ್ನು ದಾಖಲುಮಾಡಿ ಐದಾರು ತಿಂಗಳಲ್ಲಿಯೇ ಇತರೆ ಶಾಲೆಗಳಿಗೆ ಸವಾಲೆಸೆಯುವಂತೆ ಪ್ರಗತಿ ಸಾಧಿಸುವುದು ಸುಲಭದ ಮಾತಲ್ಲ ಎಂದು ಶಾಸಕ ಹೆಚ್.ಟಿ.ಮಂಜು ಅಭಿಪ್ರಾಯಪಟ್ಟರು. ಅವರು ತಾಲ್ಲೂಕಿನ ಶೀಳನೆರೆ ಹೋಬಳಿಯ ತಮ್ಮ ಸ್ವಗ್ರಾಮ ಹರಳಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನನ್ನ ಸ್ವಗ್ರಾಮ ಹಾಗೂ ನಾನು ಓದಿದ ಶಾಲೆ ಮಕ್ಕಳ ಕೊರತೆಯಾಗಿ ಮುಚ್ಚಿದ್ದು ಶಾಸಕನಾದ ನನಗೆ ಶೋಬೆ ತರುವುದಿಲ್ಲ ಎಂಬುದನ್ನು ಮನಗಂಡು ನನ್ನ ಶಾಲೆಯನ್ನೇ ಮುಚ್ಚಿ ಸರ್ಕಾರಿ ಶಾಲೆಯನ್ನು ಯಾವ ಕಾನ್ವೆಂಟ್‌ಗೂ ಕಡಿಮೆಯಿಲ್ಲದ ರೀತಿ ಮಾಡಬೇಕೆಂಬ ಆಸೆಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಾಥ್ ನೀಡಿದ ಪರಿಣಾಮ ಇಂದು ಹರಳಹಳ್ಳಿ ಸರ್ಕಾರಿ ಶಾಲೆ ಅತ್ಯುತ್ತಮವಾಗಿ ನಡೆಯುತ್ತಿದೆ. ಇದಕ್ಕೆ ಎಲ್ಲರ ಇಚ್ಛಾಶಕ್ತಿ ಕಾರಣವಾಗಿದ್ದು ಮಕ್ಕಳು ಸಾಂಸ್ಕೃತಿಕವಾಗಿ ಶೈಕ್ಷಣಿಕವಾಗಿ. ಬೌದ್ಧಿಕವಾಗಿ ಉತ್ತಮವಾಗಿ ಕಲಿಯುತ್ತಿದ್ದಾರೆ.

ಪ್ರತಿಭಾ ಕಾರಂಜಿ ಹಾಗೂ ಇತರೆ ಸ್ಪರ್ದೆಗಳಲ್ಲಿ ಸಾಕಷ್ಟು ಬಹುಮಾನ ಗಳಿಸಿದ್ದಾರೆ. ಹರಳಹಳ್ಳಿ, ಸುತ್ತಮುತ್ತಲಿನ ಗ್ರಾಮಗಳ ಪೋಷಕರು ನನ್ನ ಮೇಲೆ ನಂಬಿಕೆ ಇಟ್ಟು ಹೆಚ್ಚು ಮಕ್ಕಳನ್ನು ಸೇರಿಸಿದರೆ ಮುಂದಿನ ದಿನಗಳಲ್ಲಿ ಇಲ್ಲಿ ಮಕ್ಕಳ ಮನೆಯನ್ನು ತೆರೆಯಲಾಗುವುದು. ಅಗತ್ಯ ಇದ್ದರೆ ಇಂಗ್ಲೀಷ್ ಮಾಧ್ಯಮವನ್ನು ತೆರೆಯೋಣ. ನಿಮ್ಮೆಲ್ಲರ ಸಹಕಾರ ಅಗತ್ಯವಾಗಿ ಬೇಕಾಗಿದೆ. ನಾನು ನನ್ನ ಶಾಲೆಯ ಅಭಿವೃದ್ದಿಗಾಗಿ ಎಷ್ಟಾದರೂ ಜವಾಬ್ದಾರಿ ತೆಗೆದುಕೊಳ್ಳಲು ಸಿದ್ಧನಿದ್ದೇನೆ. ಶಾಲೆಗೆ ಅಗತ್ಯವಿರುವ ಎಲ್ಲಾ ಭೌತಿಕ ಹಾಗೂ ಮೂಲಭೂತ ಸೌಲಭ್ಯಗಳನ್ನೂ ಒದಗಿಸುತ್ತೇನೆ. ನಮ್ಮ ಗ್ರಾಮದ ಶಾಲೆಯಲ್ಲಿ ಉತ್ತಮ ಶಿಕ್ಷಕರಿದ್ದು ಬಹಳ ಉತ್ತಮವಾಗಿ ಕಲಿಸುತ್ತಿದ್ದಾರೆ. ಯಾವುದೇ ಖಾಸಗಿ ಶಾಲೆಗೂ ಕಡಿಮೆಯಿಲ್ಲದಂತೆ ನಮ್ಮ ಶಾಲೆಯಲ್ಲಿ ಕಲಿಕೆ ಸಾಗುತ್ತಿದೆ. ಪೋಷಕರು ಸಹಕಾರ ಬೆಂಬಲ ನೀಡಿದರೆ ಸರ್ಕಾರಿ ಶಾಲೆ ಅಭಿವೃದ್ದಿಯಾಗುತ್ತವೆ ಎಂಬುದಕ್ಕೆ ನಮ್ಮ ಶಾಲೆಯೇ ಉತ್ತಮ ನಿದರ್ಶನ. ಒಬ್ಬ ಶಾಸಕನಾಗಿ ಹೊಸ ಹೊಸ ಕಟ್ಟಡಗಳನ್ನ ಕಟ್ಟುವುದು ರಸ್ತೆ ಮಾಡುವುದೇ ಮುಖ್ಯ ಕೆಲಸವಲ್ಲ ತಾಲ್ಲೂಕಿನಲ್ಲಿ ಉತ್ತಮ ಶೈಕ್ಷಣಿಕ ವ್ಯವಸ್ಥೆಯನ್ನು ನಿರ್ಮಾಣ ಮಾಡುವುದು ನನ್ನ ಆದ್ಯತೆಯಾಗಿದೆ ಎಂದರು.

# ರೈತ ಸಂಘದಿಂದ ಬಾರುಕೋಲು ಚಳವಳಿ

• ಉದಯವಾಹಿನಿ, ಕನಕಪುರ:

ತಾಲ್ಲೂಕನ್ನು ಭ್ರಷ್ಟಾಚಾರದಿಂದ ಮುಕ್ತಗೊಳಿಸುವಂತೆ ಒತ್ತಾಯಿಸಿ ರೈತ ಸಂಘ, ಹಸಿರು ಸೇನೆ ಹಾಗೂ ವಿವಿಧ ಸಂಘಟನೆಯಿಂದ ತಾಲ್ಲೂಕು ಆಡಳಿತದ ವಿರುದ್ಧ ಬಾರುಕೋಲು ಚಳವಳಿ ನಡೆಸಲಾಯಿತು. ರೈತ ಸಂಘಟನೆ ಮುಖಂಡರು ಕೋಟೆ ಗಣಪತಿ ದೇವಾಲಯದಿಂದ ತಾಲ್ಲೂಕು ಕಚೇರಿವರೆಗೆ ಬಾರುಕೋಲು ಹಿಡಿದು ಮೆರವಣಿಗೆ ನಡೆಸಿ ತಾಲ್ಲೂಕು ಕಚೇರಿ ಮುಂದೆ ಜಮಾವಣೆಗೊಂಡು ತಾಲ್ಲೂಕು ಆಡಳಿತದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಮಾತನಾಡಿ, 'ರೈತರು ಮತ್ತು ಸಾರ್ವಜನಿಕರ ಸಮಸ್ಯೆಗಳು ಬಗೆಹರಿದರೆ ಯಾರೂ ಕೂಡ ತಾಲ್ಲೂಕು ಕಚೇರಿಗೆ ಬರುವುದಿಲ್ಲ, ಭೂ ವ್ಯಾಜ್ಯ ಕಡಿಮೆಯಾದರೆ ತಾಲ್ಲೂಕು ಕಚೇರಿಯಲ್ಲಿ ರೈತರಿಗೇನು ಕೆಲಸ ಇರುವುದಿಲ್ಲ, ಪೊಲೀಸ್ ಠಾಣೆ ನ್ಯಾಯಾಲಯಗಳಿಗೆ ಅಲೆದಾಡುವುದು ತಪ್ಪುತ್ತದೆ. ಆ ನಿಟ್ಟಿನಲ್ಲಿ ತಾಲ್ಲೂಕು ಆಡಳಿತವು ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

# ಭೂತರಾಯನ ಕೆರೆ ತುಂಬಿದ ಕಾವೇರಿ ಬಾಗಿನ ಅರ್ಪಿಸಿದ ಶಾಸಕ

• ಉದಯವಾಹಿನಿ, ಹನೂರು

ತಾಲ್ಲೂಕಿನ ರಾಮನಗುಡ್ಡ ಕೆರೆಯಿಂದ ಚಿಂಚಳ್ಳಿ ಹಳ್ಳಕ್ಕೆ ನೀರು ಹರಿಬಿಟ್ಟು ಚಿಂಚಳ್ಳಿ ಗ್ರಾಮದ ಭೂತ ರಾಯನ ಕೆರೆ ಭರ್ತಿಯಾಗಿ ಹರಿಯುತ್ತಿರುವುದರಿಂದ ಶಾಸಕ ಎಂ.ಆರ್ ಮಂಜುನಾಥ್ ಅವರು ಭೂತರಾಯನ ಕೆರೆಗೆ ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿದರು. ಇತಿಹಾಸದಲ್ಲಿ ಹಳ್ಳಗಳಲ್ಲಿ ತುಂಬಿ ಹರಿಯುತ್ತಿರುವ ಕಾವೇರಿ ಮಾತೆಗೆ ರೈತರು ಕೈಮುಗಿದು ಪೂಜೆ ಸಲ್ಲಿಸಿ ಸಂಭ್ರಮಿಸಿದರು. ಇದೆ ವೇಳೆ ಶಾಸಕ ಮಂಜುನಾಥ್ ಅವರು ಮಾತನಾಡಿ ರೈತರ ಹಲವು ದಶಕಗಳ ಬೇಡಿಕೆ ಈಡೇರಿಸಲು ನೀರಾವರಿ ಅಧಿಕಾರಿಗಳ ಮನವೊಲಿಸಿ ರಾಮನ ಗುಡ್ಡ ಕೆರೆಯಿಂದ ಹಳ್ಳಕ್ಕೆ ನೀರು ಹರಿಸಿರುವುದು ಈ ಭಾಗದ ರೈತರ ದಶಕಗಳ ಬೇಡಿಕೆಯಾಗಿದ್ದು ನೀರಾವರಿ ಯೋಜನೆಗಳಿಗೆ ಸದ್ಬಳಕೆ ಮಾಡಿಕೊಳ್ಳಲು ರೈತರ ಒತ್ತಾಯದ ಮೇರೆಗೆ ನೀರು ಬಿಡುಗಡೆಗೊಳಿಸಲಾಗಿದೆ. ಇದು ಇತಿಹಾಸದಲ್ಲಿ ಹಳ್ಳಗಳಲ್ಲಿ ನೀರು ಹರಿಯುತ್ತಿರುವುದಕ್ಕೆ ಹೆಮ್ಮೆ ಇದೆ. ಮುಂಗಾರು ಮಳೆ ಕ್ಷೀಣಿಸಿರುವುದರಿಂದ ಹಿಂಗಾರು ಮಳೆ ಸಹ ತಾಲ್ಲೂಕಿನಲ್ಲಿ ಬರದ ವಾತಾವರಣ ಉಂಟಾಗಿರುವುದರಿಂದ ರೈತರ ಸಂಕಷ್ಟ ಸಹ ಮಾದಪ್ಪನಿಗೆ ಪ್ರೀತಿಯಾಗಿದೆ ಹಾಗಾಗಿ ಕಾವೇರಿ ನದಿಯಿಂದ ರಾಮನಗುಡ್ಡ ಕೆರೆಗೆ ನೀರು ತುಂಬಿಸಿ ಈ ಭಾಗದ ರಾಯರ ದೊಡ್ಡಿ ಚಿಂಚಳ್ಳಿ ಮಣಗಳ್ಳಿ ಸೇರಿದಂತೆ ಶೋಮಿಯರ್ ಪಾಳ್ಯದವರು ಸಹ ಕೆರೆಯ ನೀರು ಹರಿದು ಹಳ್ಳದಲ್ಲಿ ಹರಿದು ರೈತರ ಜಮೀನುಗಳಲ್ಲಿ ಇರುವ ಬೋರ್‌ವೆಲ್ ಗಳು ತೋಡುಬಾವಿಗಳಲ್ಲಿ ಅಂತರ್ಜಲ ವೃದ್ಧಿಯಾದರೆ ರೈತರ ತಮ್ಮ ಬದುಕನ್ನು ಸಹ ಕಟ್ಟಿಕೊಳ್ಳಲಿದ್ದಾರೆ ಹೀಗಾಗಿ ರೈತರಿಗೆ ಬೇಕಾಗಿರುವ ನೀರಾವರಿ ಯೋಜನೆ ಹಾಗೂ ರಸ್ತೆ ವಿದ್ಯುತ್ ನೀಡಿದರೆ ರೈತರಿಗೆ ಅನುಕೂಲವಾಗಲಿದೆ ಎಂದರು.


ಉದಯವಾಹಿನಿ ಚಿತ್ರ

# ಬಿಜೆಪಿ, ಪರಿಸರವಾದಿಗಳ ತೀವ್ರ ವಿರೋಧ; ಹೋರಾಟ ಶುರು

## ತಿ. ನರಸೀಪುರದ ಕೆಎಸ್ಐಸಿ ಆವರಣದಲ್ಲಿ ಸ್ಟೇಡಿಯಂಗೆ ಜಾಗ, ರಾಜಕೀಯ ಸ್ವರೂಪ ಪಡೆದ ಜಾಗ ವಿವಾದ

• ಉದಯವಾಹಿನಿ, ಮೈಸೂರು

ಮೈಸೂರು ರೇಷ್ಮೆ ಸೀರೆ ಉತ್ಪಾದನೆಗೆ ನೂಲು ಸರಬರಾಜು ಮಾಡುವ ತಿ.ನರಸೀಮರದ ರೇಷ್ಮೆ ನೂಲು ತಯಾರಿಕಾ ಘಟಕದ ಆವರಣದಲ್ಲಿ ಕ್ರೀಡಾಂಗಣ ನಿರ್ಮಿಸುವ ಯೋಜನೆಯಿಂದ ಕಾರ್ಖಾನೆ ಮುಚ್ಚುವ ಶಂಕೆ ವ್ಯಕ್ತವಾಗಿದೆ. ಇದಕ್ಕೆ ಭಾರಿ ವಿರೋಧ ವ್ಯಕ್ತವಾಗಿದೆ. 2025-26 ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿ.ನರಸೀಪುರಕ್ಕೆ 6 ಕೋಟಿ ರೂ. ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣ ಘೋಷಣೆ ಮಾಡಿದ್ದರು. ಇದರ ಭಾಗವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಕೆಎಸ್‌ಐಸಿ ಫಿಲೇಚರ್ ಫ್ಯಾಕ್ಟರಿ ಘಟಕದ 13 ಎಕರೆ ಆವರಣದಲ್ಲಿ ಸುಮಾರು 5 ಎಕರೆ ಜಮೀನನ್ನು ವರ್ಗಾಯಿಸಲಾಗಿದೆ. ಈ ಫ್ಯಾಕ್ಟರಿ ನಾಲ್ವಡಿ ಕೃಷ್ಣರಾಜ ಒಡೆಯರ್ 1912ರಲ್ಲಿ ಸ್ಥಾಪಿಸಿದ್ದರು.

ಈ ಜಮೀನು ಫ್ಯಾಕ್ಟರಿಯ ಮೂಲ ಉತ್ಪಾದನಾ ಭಾಗಕ್ಕೆ ಹತ್ತಿರವಿದ್ದು ನಿರ್ಮಾಣದಿಂದ ರೇಷ್ಮೆ ದಾರ ಉತ್ಪಾದನೆಯ ಒಟ್ಟು ಚಟುವಟಿಕೆಗೆ ತೊಂದರೆಯಾಗುವ ಸಾಧ್ಯತೆ ಇದೆ ಎಂಬ ಆತಂಕವೇ ಸ್ಥಳೀಯರು, ನೌಕರರು, ಜನಪ್ರತಿನಿಧಿಗಳ ವಿರೋಧಕ್ಕೆ ಕಾರಣವಾಗಿದೆ. ಜಿಐ ಟ್ಯಾಗ್ ಹೊಂದಿರುವ ಹಾಗೂ ವಾರ್ಷಿಕ 118 ಕೋಟಿ ರೂ. ನಿವಳ ಲಾಭ ಗಳಿಸುತ್ತಿರುವ ಕಾರ್ಖಾನೆ ಮುಚ್ಚುವುದನ್ನು ವಿರೋಧಿಸಿ ನಾನಾ ಸಂಘಟನೆಗಳೂ ಪ್ರತಿಭಟನೆ ನಡೆಸುತ್ತಿವೆ.

**ಉತ್ಪಾದನೆ ಸ್ಥಗಿತ:** ತಿ.ನರಸೀಪುರ ಘಟಕದ 192ಕ್ಕೂ ಹೆಚ್ಚು ಕಾರ್ಮಿಕರು ಸೇರಿದಂತೆ ಮೈಸೂರು-ಚನ್ನಪಟ್ಟಣ ಕಾರ್ಖಾನೆಗಳಲ್ಲೂ ಕೆಲಸ ನಿಲ್ಲಿಸಲಾಗಿದೆ. ಮೂರು ಘಟಕಗಳ ಒಟ್ಟು 1,100ಕ್ಕೂ ಹೆಚ್ಚು ಸಿಬ್ಬಂದಿ ಕೆಲಸ ನಿಲ್ಲಿಸಿರುವುದು ನೇಯ್ಗೆ ಘಟಕಗಳ ಮೇಲೆ ಪರಿಣಾಮ ಬೀರಿದೆ. ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಯೋಜನೆ ಹಿಂಪಡೆಯುವಂತೆ ಮನವಿ ಮಾಡಿದ್ದಾರೆ.

**ತಾತ್ಕಾಲಿಕ ಸ್ಥಗಿತಕ್ಕೆ ಸೂಚನೆ:** ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ.ಮಹದೇವಪ್ಪ ಈ ಜಾಗವೇ ಕ್ರೀಡಾಂಗಣಕ್ಕೆ ತಿ.ನರಸೀಪುರದಲ್ಲಿ ಸೂಕ್ತವಾದ ಸ್ಥಳ ಎಂದು ವಾದಿಸಿದ್ದಾರೆ. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ನಿರ್ಮಾಣ ಕಾಮಗಾರಿ ಸ್ಥಗಿತಗೊಳಿಸಲಾಗಿದೆ.

**ಕಾರ್ಖಾನೆ ಜಾಗ ಬೇಡ:** ದಿನಕ್ಕೆ 5 ಲಕ್ಷಟನ್ ಕಲ್ಲಿದ್ದಲು, ಅದರ ಬೂದಿ ಸಂಗ್ರಹ, ಕ್ಯಾಂಟೀನ್, ವಾಹನ ನಿಲುಗಡೆ, ಬಳಸಿದ ನೀರಿನ ಶುದ್ಧೀಕರಣ ಘಟಕ, ಜಿಐ ಟ್ಯಾಗ್ ಉಳಿಸಿಕೊಳ್ಳಲು ಕಾರ್ಖಾನೆಯಿಂದ ಪಡೆದಿರುವ 5.08 ಎಕರೆ ಜಾಗವನ್ನು ಮರಳಿಸಬೇಕೆಂದು ನೌಕರರು ಒತ್ತಾಯಿಸುತ್ತಿದ್ದಾರೆ.

**ಮೈಸೂರು ರೇಷ್ಮೆ ಕಾರ್ಖಾನೆಗೆ ಆಪತ್ತು**

**ಏನು ಪರಿಣಾಮ ?**

- **ಮೈಸೂರು ಸಿಲ್ಕ್ ಸೀರೆಗಳ ಉತ್ಪಾದನೆಯ ಮೇಲೆ ನೇರ ಪರಿಣಾಮ**
- **500ಕ್ಕೂ ಹೆಚ್ಚು ಮರಗಳನ್ನು ಕಡಿಯುವ ಸಾಧ್ಯತೆಯಿಂದ ಪರಿಸರಕ್ಕೆ ಧಕ್ಕೆ**
- **ಕಾರ್ಖಾನೆ ಹಾಗೂ ಅಲ್ಲಿನ ನೌಕರರ ಭವಿಷ್ಯದ ಆತಂಕ**
- **ಕಾರ್ಖಾನೆ ಸ್ಥಗಿತಗೊಂಡರೆ ಪರಂಪರೆಯೂ ಕಣ್ಮರೆಯಾಗುತ್ತದೆ.**



**ಸಿಲ್ಕ್ ಮತ್ತು ಮಿಲ್ಕ್ ಎರಡೂ ಬ್ರಾಂಡ್‌ಗಳಾಗಿವೆ. ನಿರ್ಮಾಣ ಯೋಜನೆಯನ್ನು ಕೈ ಬಿಡದಿದ್ದರೆ ಬಿಜೆಪಿಯಿಂದ ಸೇವ್ ಮೈಸೂರು ಸಿಲ್ಕ್ ಅಭಿಯಾನ ನಡೆಸಲಾಗುವುದು.**
**–ಆರ್.ಅಶೋಕ್ ವಿಧಾನಸಭೆ ಪ್ರತಿಪಕ್ಷ ನಾಯಕ**

**ಮಹಾರಾಜರು ಸ್ಥಾಪಿಸಿದ, ಸಹಸ್ರಾರು ಜನರಿಗೆ ಉದ್ಯೋಗ ಕೊಟ್ಟಿರುವ ಕೆಎಸ್ ಐಸಿ ಮುಚ್ಚುವ ಪ್ರಶ್ನೆಯೇ ಇಲ್ಲ, ಅಪಪ್ರಚಾರ ಸಲ್ಲದು.**
**– ಸುನಿಲ್ ಬೋಸ್ ಚಾಮರಾಜನಗರ ಸಂಸದ**

**ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಕಾರ್ಖಾನೆಯ ಭೂಮಿ ಮಂಜೂರಾಗಿ ಯುವ ಸಬಲೀಕರಣ, ಕ್ರೀಡಾ ಇಲಾಖೆಗೆ ಹಸ್ತಾಂತರಿಸಲಾಗಿದೆ. ಇದರಿಂದ ಕಾರ್ಖಾನೆ ಚಟುವಟಿಕೆಗೆ ಧಕ್ಕೆಯಾಗುವುದಿಲ್ಲ. ತಾಲ್ಲೂಕಿನ ಕ್ರೀಡಾ ಚಟುವಕೆಗೆ ಅನುಕೂಲವಾಗಲಿದೆ.**
**–ಭಾಸ್ಕರ್ ನಾಯಕ್ ಸಹಾಯಕ ನಿರ್ದೇಶಕ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ**

## ಪ.ಬಂಗಾಳದಲ್ಲಿ ಪಿಂಕ್ ಬೂತ್, ಶೈನಿಂಗ್ ಹೆಸರಿನ ಮಹಿಳಾ ಗಸ್ತು ತಂಡಗಳ ಸ್ಥಾಪನೆ

**ಕೋಲ್ಕತ್ತಾ:** ವಿಧಾನಸಭೆ ಚುನಾವಣೆ ಹತ್ತಿರವಾಗುತ್ತಿರುವ ಹೊತ್ತಲ್ಲಿ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿದ್ದಾರೆ. ಕೋಲ್ಕತ್ತಾ ಪೊಲೀಸ್‌ನ ಮೂಲಕ ಎರಡು ಹೊಸ ಉಪಕ್ರಮಗಳನ್ನು ಘೋಷಿಸಿದ್ದಾರೆ. ಮಹಿಳಾ ಪೊಲೀಸ್ ಸಿಬ್ಬಂದಿಯಿಂದ ಕೂಡಿದ ಪಿಂಕ್ ಬೂತ್ ಮತ್ತು ಶೈನಿಂಗ್ ಎಂಬ ಹೆಸರಿನ ಮಹಿಳಾ ಮೊಬೈಲ್ ಗಸ್ತು ತಂಡಗಳನ್ನು ಸ್ಥಾಪಿಸಿದ್ದಾರೆ.

ಮಮತಾ ಬ್ಯಾನರ್ಜಿ ಸಾಮಾಜಿಕ ಜಾಲತಾಣದಲ್ಲಿ ತಮ್ಮ ಪೋಸ್ಟ್‌ನಲ್ಲಿ ಈ ವಿವರಗಳನ್ನು ಹಂಚಿಕೊಂಡಿದ್ದಾರೆ. ನಗರದ ಪ್ರಮುಖ ಜಂಕ್ಷನ್‌ಗಳಲ್ಲಿ ಪಿಂಕ್ ಬೂತ್‌ಗಳನ್ನು ಸ್ಥಾಪಿಸಲಾಗುತ್ತದೆ. ಇವು ಸಂಜೆಯಿಂದ ಮಧ್ಯರಾತ್ರಿಯವರೆಗೆ ಕಾರ್ಯನಿರ್ವಹಿಸಲಿವೆ. ಈ ಬೂತ್‌ಗಳಲ್ಲಿ ನಿಯೋಜಿತ ಮಹಿಳಾ ಪೊಲೀಸ್ ಸಿಬ್ಬಂದಿ ಮಹಿಳೆಯರಿಗೆ ನೇರವಾಗಿ ಸಹಾಯ ಮಾಡುತ್ತಾರೆ ಮತ್ತು ದೂರುಗಳ ಮೇಲೆ ತಕ್ಷಣ ಕ್ರಮ ಕೈಗೊಳ್ಳುತ್ತಾರೆ. ಇದರಿಂದ ಮಹಿಳೆಯರು ತಮ್ಮ ಸಮಸ್ಯೆಗಳನ್ನು ಮಹಿಳಾ ಅಧಿಕಾರಿಗಳೊಂದಿಗೆ ನೇರವಾಗಿ ಹಂಚಿಕೊಳ್ಳಬಹುದು ಮತ್ತು ಸುರಕ್ಷತೆಯ ಬಗ್ಗೆ ಹೆಚ್ಚಿನ ವಿಶ್ವಾಸ ಬೆಳೆಸಿಕೊಳ್ಳಬಹುದು ಎಂದು ಮಮತಾ ಹೇಳಿದ್ದಾರೆ. ಇದಲ್ಲದೆ, ಶೈನಿಂಗ್ ಎಂಬ ಹೆಸರಿನ ಮಹಿಳಾ ಮೊಬೈಲ್ ಗಸ್ತು ತಂಡಗಳನ್ನು ರಾತ್ರಿ 8 ಗಂಟೆಯಿಂದ ಬೆಳಿಗ್ಗೆ 2 ಗಂಟೆಯವರೆಗೆ ನಿಯೋಜಿಸಲಾಗುತ್ತದೆ. ಈ ತಂಡಗಳು ಎಫ್‌ಜೆಎ ಬೈಪಾಸ್ ಮತ್ತು ನಗರದ ಇತರ ಪ್ರಮುಖ ರಸ್ತೆಗಳಲ್ಲಿ ಸುತ್ತಾಡಲಿವೆ. ರಾತ್ರಿ ಸಮಯದಲ್ಲಿ ಕೆಲಸ ಮಾಡುವ ಮಹಿಳೆಯರು ಹೆಚ್ಚಾಗಿ ಬಳಸುವ ರಸ್ತೆಗಳಲ್ಲಿ ಗಸ್ತು ನಡೆಸಲಾಗುತ್ತದೆ.

ಕೋಲ್ಕತ್ತಾ ದೇಶದ ಅತ್ಯಂತ ಸುರಕ್ಷಿತ ನಗರವಾಗಿ ವರ್ಷಗಳಿಂದ ಗುರುತಿಸಲ್ಪಟ್ಟಿದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಈ ಎರಡು ಹೊಸ ಉಪಕ್ರಮಗಳು ಮಹಿಳೆಯರ ಸುರಕ್ಷತಾ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸಲಿವೆ ಎಂದು ಅವರು ತಿಳಿಸಿದ್ದಾರೆ.

### ಭಾರತದ ಸೆಮಿಕಂಡಕ್ಟರ್ ಉತ್ಪಾದನಾ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲು

## ಮೈಕ್ರಾನ್‌ನ ಸೆಮಿಕಂಡಕ್ಟರ್ ಸೌಲಭ್ಯ ಉದ್ಘಾಟಿಸಿದ ಮೋದಿ

**ಅಹಮದಾಬಾದ್:** ಗುಜರಾತ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸನಂದ್‌ನಲ್ಲಿರುವ ಮೈಕ್ರಾನ್ ಸೆಮಿಕಂಡಕ್ಟರ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ಸೆಮಿಕಂಡಕ್ಟರ್ ಅಸೆಂಬ್ಲಿ, ಟೆಸ್ಟ್ ಮತ್ತು ಪ್ಯಾಕೇಜಿಂಗ್ ಸೌಲಭ್ಯವನ್ನು ಉದ್ಘಾಟಿಸಿದರು. ಈ ಉದ್ಘಾಟನೆಯು ಭಾರತದ ಸೆಮಿಕಂಡಕ್ಟರ್ ಉತ್ಪಾದನಾ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುತ್ತದೆ. ಸನಂದ್ ಎಟಿಎಂಪಿ ಸೌಲಭ್ಯದಿಂದ ಭಾರತದಲ್ಲಿ ತಯಾರಿಸಿದ ಮೊದಲ ಸೆಮಿಕಂಡಕ್ಟರ್ ಮೆಮೊರಿ ಮಾಡ್ಯೂಲ್‌ಗಳ ವಾಣಿಜ್ಯ ಉತ್ಪಾದನೆ ಮತ್ತು ಸಾಗಣೆಯನ್ನು ಪ್ರಾರಂಭಿಸಿದೆ. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭಾರತವು ತನ್ನ ಸಾಫ್ಟ್‌ವೇರ್ ಬಲಕ್ಕೆ ಹೆಸರುವಾಸಿಯಾಗಿದೆ, ಈಗ ಹಾರ್ಡ್‌ವೇರ್ ವಲಯದಲ್ಲೂ ತನ್ನ ಗುರುತನ್ನು ದೃಢವಾಗಿ ಸ್ಥಾಪಿಸುತ್ತಿದೆ. ನಾನೇ ಸ್ವತಃ ಸನಂದ್ ಕಾರು ಕಾರ್ಖಾನೆಯಿಂದ ದೇಶದ ಪ್ರಮುಖ ಆಟೋಮೊಬೈಲ್ ಕೇಂದ್ರಗಳಲ್ಲಿ ಒಂದಾಗಿ ರೂಪಾಂತರಗೊಳ್ಳುವುದನ್ನು ನೋಡಿದ್ದೇನೆ. ಒಂದು ದೊಡ್ಡ ಆಟೋಮೊಬೈಲ್ ಕಂಪನಿ ಇಲ್ಲಿಗೆ ಬಂದಾಗ, ಅದರೊಂದಿಗೆ ಇಡೀ ಪರಿಸರ ವ್ಯವಸ್ಥೆಯೂ ಅಭಿವೃದ್ಧಿಗೊಂಡಿತು. ಒಂದು ಕಂಪನಿಯ ಆಗಮನವು ಅನೇಕ ಪೂರಕ ಘಟಕಗಳ ಸ್ಥಾಪನೆಗೆ ಕಾರಣವಾಯಿತು, ಪೂರೈಕೆದಾರರ ಜಾಲವನ್ನು ನಿರ್ಮಿಸಲಾಯಿತು, ಸ್ಥಳೀಯ ಉದ್ಯಮವನ್ನು ಬಲಪಡಿಸಲಾಯಿತು. ಇದರಿಂದ ಉದ್ಯೋಗ ಮತ್ತು ಹೂಡಿಕೆ ಎರಡೂ ಹೆಚ್ಚಾಯಿತು. ದೇಶ ಮತ್ತು ಪ್ರಪಂಚದಾದ್ಯಂತದ ಜನರು ಈಗ ಇಲ್ಲಿ ಕೆಲಸ ಮಾಡಲು ಬರುತ್ತಿದ್ದಾರೆ. ಒಂದು ಸಣ್ಣ ಪಟ್ಟಣವು ಜಾಗತಿಕ ನಕ್ಷೆಯಲ್ಲಿ ಇದ್ದಕ್ಕಿದ್ದಂತೆ ತನ್ನ ಸ್ಥಾನವನ್ನು ಪಡೆದುಕೊಂಡಿದೆ ಎಂಬುದು ನಿಜ. ನೀವು ಬಯಸುವ ಜೀವನಶೈಲಿ, ನೀವು ಬಯಸುವ ಸಾಮಾಜಿಕ ಜೀವನ ಮತ್ತು ನೀವು ಬದುಕಲು ಬಯಸುವ ರೀತಿಯಲ್ಲಿ ಗುಜರಾತ್ ನಿಮಗಾಗಿ ಎಲ್ಲವನ್ನೂ ಸೃಷ್ಟಿಸುತ್ತದೆ ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ ಎಂದಿದ್ದಾರೆ. ಭಾರತೀಯ ಜನಸಂಖ್ಯೆಯ ದೊಡ್ಡ ಜನಸಂಖ್ಯೆಯು ಗ್ಯಾಜೆಟ್‌ಗಳ ದೊಡ್ಡ ಗ್ರಾಹಕರಾಗುತ್ತಿದೆ ಮತ್ತು ದೇಶದಲ್ಲಿ ಬೇಡಿಕೆ ಹೆಚ್ಚುತ್ತಿದೆ. ಮೇಕ್ ಇನ್ ಇಂಡಿಯಾ ಪೂರ್ಣ ಪ್ರಮಾಣದಲ್ಲಿ ಮುಂದುವರಿಯುತ್ತಿದೆ. ಕಳೆದ 11 ವರ್ಷಗಳಲ್ಲಿ ಎಲೆಕ್ಟ್ರಾನಿಕ್ ಉತ್ಪಾದನೆ ಮತ್ತು ರಫ್ತು ಬಹುಪಟ್ಟು ಹೆಚ್ಚಾಗಿದೆ ಎಂದು ಮೋದಿ ಹೇಳಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಸೆಮಿಕಂಡಕ್ಟರ್ ಉದ್ಯಮದಲ್ಲಿ ಭಾರತವು ಜಾಗತಿಕ ನಕ್ಷೆಯಲ್ಲಿ ತನ್ನ ಸ್ಥಾನವನ್ನು ಸ್ಥಾಪಿಸಿದೆ. ಭಾರತದ ಎಲೆಕ್ಟ್ರಾನಿಕ್ಸ್ ಉತ್ಪಾದನೆಯು 6 ಪಟ್ಟು ಬೆಳವಣಿಗೆಯನ್ನು ದಾಖಲಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಎಲೆಕ್ಟ್ರಾನಿಕ್ಸ್ ರಫ್ತು 8 ಪಟ್ಟು ಬೆಳವಣಿಗೆಯನ್ನು ದಾಖಲಿಸಿದೆ. ಮೊಬೈಲ್ ಫೋನ್‌ಗಳು ಈಗ ದೇಶದ ಪ್ರಮುಖ ರಫ್ತು ವಸ್ತುಗಳಲ್ಲಿ ಒಂದಾಗಿದೆ ಎಂದು ಹೇಳಿದರು.

**ಇಡೀ ಪರಿಸರ ವ್ಯವಸ್ಥೆಯೂ ಅಭಿವೃದ್ಧಿ**



> ಈ ಮೈಕ್ರಾನ್ ಸೌಲಭ್ಯ ಮತ್ತು ಇಂದಿನ ಕಾರ್ಯಕ್ರಮವು ಭಾರತ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವಿನ ಬಲವಾದ ಸಹಕಾರ ಮತ್ತು ಪಾಲುದಾರಿಕೆಗೆ ಸಾಕ್ಷಿಯಾಗಿದೆ. ವಿಶೇಷವಾಗಿ ಎಐ ಮತ್ತು ಸೆಮಿಕಂಡಕ್ಟರ್‌ಗಳಂತಹ ತಂತ್ರಜ್ಞಾನಗಳ ಕ್ಷೇತ್ರಗಳಲ್ಲಿ ಭಾರತ-ಯುಎಸ್ ಪಾಲುದಾರಿಕೆ ಅತ್ಯಂತ ಮುಖ್ಯವಾಗಿದೆ. ಎಐ ಶೃಂಗಸಭೆಯ ಸಮಯದಲ್ಲಿ ಭಾರತ ಮತ್ತು ಯುಎಸ್ ನಡುವಿನ ಪ್ಯಾಕ್ ಸಿಲಿಕಾನ್ ಉಪಕ್ರಮಕ್ಕೆ ಸಂಬಂಧಿಸಿದ ಒಪ್ಪಂದವು ಈ ದಿಕ್ಕಿನಲ್ಲಿ ಮತ್ತೊಂದು ಹೆಜ್ಜೆಯಾಗಿದೆ. ನಮ್ಮ ಜಂಟಿ ಪ್ರಯತ್ನಗಳು ನಿರ್ಣಾಯಕ ಖನಿಜಗಳ ಜಾಗತಿಕ ಪೂರೈಕೆ ಸರಪಳಿಗಳನ್ನು ಹೆಚ್ಚು ಸುರಕ್ಷಿತ ಮತ್ತು ಹೆಚ್ಚು ವಿಶ್ವಾಸಾರ್ಹವಾಗಿಸುತ್ತದೆ -ಪ್ರಧಾನಿ ನರೇಂದ್ರ ಮೋದಿ

## ಮಿನಿ ನ್ಯೂಸ್

### ಉತ್ತರ ಪ್ರದೇಶದ ಕಾನ್ಪುರ ರೈಲು ನಿಲ್ದಾಣ ಸ್ಫೋಟಿಸುವುದಾಗಿ ಬೆದರಿಕೆ

**ಕಾನ್ಪುರ:** ಉತ್ತರ ಪ್ರದೇಶದ ಕಾನ್ಪುರ ರೈಲು ನಿಲ್ದಾಣಕ್ಕೆ 36 ಗಂಟೆಗಳ ಒಳಗೆ ಎರಡನೇ ಬಾರಿಗೆ ಬಾಂಬ್ ಬೆದರಿಕೆ ಕರೆ ಬಂದಿದೆ. ಆದರೆ, ಅಧಿಕಾರಿಗಳು ಶೋಧ ನಡೆಸಿದಾಗ ಅದು ಹುಸಿ ಕರೆ ಎನ್ನುವುದು ಪತ್ತೆಯಾಗಿದೆ. ಈ ಬೆದರಿಕೆ ಕರೆ ಕಾನ್ಪುರ ಸೆಂಟ್ರಲ್ ರೈಲ್ವೆ ನಿಲ್ದಾಣದಲ್ಲಿ ಬೃಹತ್ ಭದ್ರತಾ ಕಾರ್ಯಾಚರಣೆಗೆ ಕಾರಣವಾಯಿತು, ಆದರೆ ವ್ಯಾಪಕ ಶೋಧದ ನಂತರ ಯಾವುದೇ ಅನುಮಾನಾಸ್ಪದ ವಸ್ತು ಕಂಡುಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಸಂಜೆ 7 ಗಂಟೆ ಸುಮಾರಿಗೆ 112 ನಿಯಂತ್ರಣ ಕೊಠಡಿಗೆ ತುರ್ತು ಕರೆ ಬಂದಿದ್ದು, ರೈಲ್ವೆ ನಿಲ್ದಾಣವನ್ನು ಸ್ಫೋಟಿಸಲಾಗುವುದು ಎಂದು ಎಚ್ಚರಿಸಲಾಗಿದೆ ಎಂದು ಉಪ ಪೊಲೀಸ್ ಆಯುಕ್ತ (ಪೂರ್ವ) ಸತ್ಯಜೀತ್ ಗುಪ್ತಾ ತಿಳಿಸಿದ್ದಾರೆ. ಎಚ್ಚರಿಕೆಯಿಂದಾಗಿ ತಕ್ಷಣದ ಹೆಚ್ಚಿನ ಭದ್ರತಾ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಹಿರಿಯ ಪೊಲೀಸ್ ಮತ್ತು ಆಡಳಿತ ಅಧಿಕಾರಿಗಳು, ಭಾರೀ ಪೊಲೀಸ್ ಪಡೆ, ಬಾಂಬ್ ನಿಷ್ಕ್ರಿಯ ದಳ (ಬಿಡಿಎಸ್), ವಿಧ್ವಂಸಕ ಕೃತ್ಯಗಳನ್ನು ತಡೆಯುವ ತಪಾಸಣಾ ತಂಡಗಳು ಮತ್ತು ಶ್ವಾನ ದಳಗಳು ನಿಲ್ದಾಣಕ್ಕೆ ಧಾವಿಸಿವೆ ಎಂದು ಅವರು ಹೇಳಿದರು. ಯಾವುದೇ ಬೆದರಿಕೆಯನ್ನು ತಳ್ಳಿಹಾಕಲು ಪೊಲೀಸರು ಮತ್ತು ಭದ್ರತಾ ತಂಡಗಳು ಎಲ್ಲಾ ಪ್ಲಾಟ್‌ಫಾರ್ಮ್‌ಗಳು, ಸಂಚಾರಿ ಪ್ರದೇಶಗಳು, ಕಾಯುವ ಸಭಾಂಗಣಗಳು, ಪಾರ್ಸೆಲ್ ಕಚೇರಿಗಳು ಮತ್ತು ಪಾರ್ಕಿಂಗ್ ವಲಯಗಳಲ್ಲಿ ತೀವ್ರ ತಪಾಸಣೆ ನಡೆಸಿದವು.

ಎಲ್ಲಾ ಅನುಮಾನಾಸ್ಪದ ವಸ್ತುಗಳನ್ನು ಪರಿಶೀಲಿಸಲಾಯಿತು ಮತ್ತು ಕಾರ್ಯಾಚರಣೆಯ ಸಮಯದಲ್ಲಿ ಪ್ರಯಾಣಿಕರ ಚಲನವಲನಗಳನ್ನು ಸೂಕ್ಷ್ಮವಾಗಿ ಗಮನಿಸಲಾಯಿತು. ಯಾವುದೇ ಸ್ಫೋಟಕ ವಸ್ತು ಅಥವಾ ಆಕ್ಷೇಪಾರ್ಹ ವಸ್ತು ಕಂಡುಬಂದಿಲ್ಲ ಎಂದು ಅಧಿಕಾರಿ ಹೇಳಿದರು.

### 3 ನಗರಗಳ ಹೆಸರು ಬದಲಾವಣೆ ಮಾಡಿದ ರಾಜಸ್ಥಾನದ ಮುಖ್ಯಮಂತ್ರಿ

**ಜೈಪುರ:** ರಾಜಸ್ಥಾನದಲ್ಲಿ ಏಕಕಾಲದಲ್ಲಿ ಹಲವಾರು ಪ್ರಮುಖ ಘೋಷಣೆಗಳನ್ನು ಮಾಡಲಾಗಿದೆ. ಸ್ಥಳಗಳು, ಜಿಲ್ಲೆಗಳು ಮತ್ತು ರಾಜ್ಯಗಳ ಹೆಸರುಗಳನ್ನು ಬದಲಾಯಿಸಲಾಗುತ್ತಿದೆ. ಇತ್ತೀಚೆಗೆ, ಕೇರಳವನ್ನು ಕೇರಳಂ ಎಂದು ಮರುನಾಮಕರಣ ಮಾಡಲಾಗಿದೆ. ಈಗ, ಮುಖ್ಯಮಂತ್ರಿ ಭಜನ್ ಲಾಲ್ ರಾಜಸ್ಥಾನದ ಹಲವಾರು ಸ್ಥಳಗಳ ಮರುನಾಮಕರಣಗಳನ್ನು ಘೋಷಿಸಿದ್ದಾರೆ. ಈ ಪ್ರಕಟಣೆಗಳು ಆಡಳಿತ ಮತ್ತು ಸಾಮಾಜಿಕ ವಲಯಗಳಲ್ಲಿ ಬಿಸಿ ಚರ್ಚೆಗೆ ನಾಂದಿ ಹಾಡಿವೆ.

ಐತಿಹಾಸಿಕ ಮತ್ತು ಧಾರ್ಮಿಕ ಮಹತ್ವವುಳ್ಳ ಕೆಲವು ನಗರಗಳ ಮರುನಾಮಕರಣದ ಘೋಷಣೆ ಅತ್ಯಂತ ಗಮನಾರ್ಹವಾದುದು. ಹೆಚ್ಚುವರಿಯಾಗಿ, ಮಧ್ಯಾಹ್ನದ ಬಿಸಿಯೂಟ ಕಾರ್ಮಿಕರಿಂದ ಹಿಡಿದು ಪತ್ರಕರ್ತರು ಮತ್ತು ಶಾಸಕರವರೆಗೆ ವಿವಿಧ ವಲಯಗಳಿಗೆ ಪರಿಹಾರ ಮತ್ತು ಸವಲತ್ತುಗಳನ್ನು ಘೋಷಿಸಲಾಗಿದೆ. ಮೌಂಟ್ ಅಬುವನ್ನು ಅಬು ರಾಜ್ ಎಂದು ಮರುನಾಮಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದ್ದಾರೆ. ಅದೇ ರೀತಿ, ಜಹಾಜ್‌ಪುರವನ್ನು ಯಜ್ಞಪುರ ಎಂದು ಮರುನಾಮಕರಣ ಮಾಡಲಾಗುವುದು. ಈ ಹೊಸ ಹೆಸರುಗಳು ಸ್ಥಳೀಯ ಸಾಂಸ್ಕೃತಿಕ ಗುರುತನ್ನು ಬಲಪಡಿಸುತ್ತವೆ ಎಂದು ಸರ್ಕಾರ ಹೇಳಿದೆ.

### ವಿಜಯವಾಡ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ: ಕನಿಷ್ಠ 20 ಕಾರ್ಮಿಕರು ಸಾವು

**ವಿಜಯವಾಡ :** ಕಾಕಿನಾಡ ಜಿಲ್ಲೆಯ ಸಮರ್ಲಕೋಟ ಮಂಡಲದ ವೆಟ್ಲಪಲೆಂ ಗ್ರಾಮದಲ್ಲಿ ಮಧ್ಯಾಹ್ನ 2.45 ರ ಸುಮಾರಿಗೆ ಸೂರ್ಯ ಪಟಾಕಿ ಉತ್ಪಾದನಾ ಘಟಕದಲ್ಲಿ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಮೃತದೇಹಗಳು ನೂರಾರು ಅಡಿ ದೂರಕ್ಕೆ ಹೋಗಿ ಬಿದ್ದಿವೆ. ಉತ್ಪಾದನಾ ಘಟಕದ ಪಕ್ಕದ ಭತ್ತದ ಗದ್ದೆಗಳಲ್ಲಿ ಕನಿಷ್ಠ 15 ಮೃತ ದೇಹಗಳು ಪತ್ತೆಯಾಗಿವೆ ಎನ್ನಲಾಗಿದೆ.

ಸ್ಫೋಟ ಸಂಭವಿಸಿದಾಗ ಸುಮಾರು 30 ಕಾರ್ಮಿಕರು ಉತ್ಪಾದನಾ ಕೆಲಸದಲ್ಲಿ ನಿರತರಾಗಿದ್ದರು ಎನ್ನಲಾಗಿದೆ. ಹೆಚ್ಚಿನವರು ಮಹಿಳೆಯರಾಗಿದ್ದು, ಐವರು ತೀವ್ರವಾಗಿ ಗಾಯಗೊಂಡಿದ್ದಾರೆ. ಅವರನ್ನೂ ಕೂಡಲೇ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನೂ ಕೆಲವರು ಅವಶೇಷಗಳ ಅಡಿಯಲ್ಲಿ ಇದ್ದಾರೆ ಎನ್ನಲಾಗಿದೆ. ಸಾವಿನ ಸಂಖ್ಯೆ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ. ಬೆಂಕಿ ನಂದಿಸುವಲ್ಲಿ ಅಗ್ನಿಶಾಮಕ ಸಿಬ್ಬಂದಿ ಹರಸಾಹಸಪಡುತ್ತಿದ್ದಾರೆ.

**ಮುಂದುವರೆದ ಕಾರ್ಯಾಚರಣೆ:** ಕಾಕಿನಾಡ ಪೊಲೀಸ್ ವರಿಷ್ಠಾಧಿಕಾರಿ ಜಿ. ಬಿಂದು ಮಾಧವ್ ಅವರು ಈ ಬಗ್ಗೆ ಮಾತನಾಡಿದ್ದು, ಪಟಾಕಿ ಉತ್ಪಾದನಾ ಘಟಕದ ಸುತ್ತಮುತ್ತಲಿನ ಭತ್ತದ ಗದ್ದೆಗಳಲ್ಲಿ ಹರಡಿಕೊಂಡಿರುವ 15 ಮೃತ ದೇಹಗಳನ್ನು ನಾವು ವಶಪಡಿಸಿಕೊಂಡಿದ್ದೇವೆ. ಭತ್ತದ ಗದ್ದೆಗಳಲ್ಲಿ ಮೃತ ದೇಹಗಳನ್ನು ಗುರುತಿಸಲು ಡ್ರೋನ್‌ಗಳನ್ನು ನಿಯೋಜಿಸುವ ಮೂಲಕ ಹುಡುಕಾಟ ಇನ್ನೂ ಮುಂದುವರೆದಿದೆ. ಮೃತರಲ್ಲಿ ಹೆಚ್ಚಿನವರು ಮಹಿಳೆಯರು ಎಂದಿದ್ದಾರೆ.



## ಪಾಕಿಸ್ತಾನ - ಅಫ್ಘಾನಿಸ್ತಾನ ಯುದ್ಧದ ನಡುವೆ ಪಾಕ್ ನಾಯಕತ್ವ ಹೊಗಳಿದ ಟ್ರಂಪ್


- ಪಾಕಿಸ್ತಾನ ಹಾಗೂ ಅಫ್ಘಾನಿಸ್ತಾನದ ನಡುವಿನ ಯುದ್ಧ
- ಯುದ್ಧದ ಕುರಿತಾಗಿ ಅಮೆರಿಕಾ ಅಧ್ಯಕ್ಷ ಟ್ರಂಪ್ ನಿಲುವೇನು
- ಪರೋಕ್ಷವಾಗಿ ಪಾಕಿಸ್ತಾನಕ್ಕೆ ಬೆಂಬಲ ಸೂಚಿಸಿದ ಟ್ರಂಪ್

**ವಾಷಿಂಗ್ಟನ್:** ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವಿನ ಯುದ್ಧದ ನಡುವೆ ಪಾಕಿಸ್ತಾನದ ನಾಯಕತ್ವದ ಬಗ್ಗೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೆಚ್ಚುಗೆಯ ಮಾತನ್ನಾಡಿರುವುದು ಇದೀಗ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಈ ಬಗ್ಗೆ ಮಾಧ್ಯಮಗಳಿಗೆ ನೀಡಿರುವ ಹೇಳಿಕೆಯಲ್ಲಿ ಪಾಕಿಸ್ತಾನದ ಪ್ರಧಾನ ಶೆಹಬಾಜ್ ಷರೀಫ್ ಹಾಗೂ ಸೇನಾ ಮುಖ್ಯಸ್ಥ ಅಸೀಮ್ ಮುನೀರ್ ಕುರಿತಾಗಿ ಮೆಚ್ಚುಗೆಯ ಮಾತನ್ನಾಡಿದ್ದಾರೆ.

ಯುದ್ಧದ ಹಿನ್ನಲೆಯಲ್ಲಿ ಮಧ್ಯಪ್ರವೇಶ ಮಾಡುತ್ತೀರಾ ಎಂಬ ಪ್ರಶ್ನೆಗೆ ನಾನು ಮಧ್ಯಪ್ರವೇಶ ಮಾಡುತ್ತೇನೆ. ಆದರೆ ಪಾಕಿಸ್ತಾನದ ಜೊತೆ ನನ್ನ ಸಂಬಂಧವು ತುಂಬಾ ಉತ್ತಮವಾಗಿದೆ. ಪಾಕಿಸ್ತಾನದಲ್ಲಿ ಒಬ್ಬ ಉತ್ತಮ ಪ್ರಧಾನ ಮಂತ್ರಿ ಹಾಗೂ ಒಬ್ಬ ಶ್ರೇಷ್ಠ ಸೇನಾ ಜನರಲ್ ಇದ್ದಾರೆ ಎಂದು ಉಲ್ಲೇಖಿಸಿದ್ದಾರೆ.

ಅವರು ಶ್ರೇಷ್ಠ ನಾಯಕನನ್ನು ಹೊಂದಿದ್ದಾರೆ. ಆ ಇಬ್ಬರು ವ್ಯಕ್ತಿಗಳನ್ನು ನಾನು ತುಂಬಾ ಗೌರವಿಸುತ್ತೇನೆ. ಪಾಕಿಸ್ತಾನವು ಅದ್ಭುತವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಪಾಕಿಸ್ತಾದ ಪರವಾಗಿ ಟ್ರಂಪ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

**ಅಮೆರಿಕಾದ ನಡೆ ಏನು?:** ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವೆ ಯುದ್ಧ ಆರಂಭಗೊಂಡಿದೆ. ಅಮೆರಿಕಾದ ವಿದೇಶಾಂಗ ಇಲಾಖೆಯೂ ಪಾಕಿಸ್ತಾನಕ್ಕೆ ಬೆಂಬಲ ಸೂಚಿಸಿದೆ. ಇತ್ತೀಚಿನ ಹೋರಾಟದಲ್ಲಿ ಮೃತಪಟ್ಟ ಜೀವಗಳಿಗೆ ಸಂತಾಪ ಸೂಚಿಸಲು ಪಾಕಿಸ್ತಾನದ ವಿದೇಶಾಂಗ ಕಾರ್ಯದರ್ಶಿ ಜೊತೆಗೆ ಮಾತನಾಡಿದ್ದೇನೆ ಎಂದು ಅಮೆರಿಕಾದ ವಿದೇಶಾಂಗ ಕಾರ್ಯದರ್ಶಿ ಆಲಿಸನ್ ಎಂ ಹೂಕರ್ ತಿಳಿಸಿದ್ದಾರೆ.



ಅಲ್ಲದೆ, ಪರಿಸ್ಥಿತಿಯನ್ನು ನಾವು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ತಾಲಿಬಾನ್ ದಾಳಿಯ ವಿರುದ್ಧ ತನ್ನನ್ನು ರಕ್ಷಣೆ ಮಾಡಿಕೊಳ್ಳುವ ಪಾಕಿಸ್ತಾನದ ಹಕ್ಕಿಗೆ ನಮ್ಮ ಬೆಂಬಲ ಇದೆ ಎಂದು ಅವರು ಹೇಳಿದ್ದಾರೆ. ನೆರೆ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವೆ ಯುದ್ಧ ಆರಂಭವಾಗಿದೆ. ಗಡಿ ಹಂಚಿಕೆ ವಿಚಾರವಾಗಿ ನಡೆಯುತ್ತಿದ್ದ ಸಂಘರ್ಷ ಇದೀಗ ಯುದ್ಧ ಘೋಷಣೆಯ ಹಂತಕ್ಕೆ ತಲುಪಿದೆ.

ಪಾಕಿಸ್ತಾನ ಸರ್ಕಾರ ಅಫ್ಘಾನಿಸ್ತಾನದ ತಾಲಿಬಾನ್ ವಿರುದ್ಧ ಮುಕ್ತ ಯುದ್ಧ ಘೋಷಣೆ ಮಾಡಿದೆ. ಈ ಬಗ್ಗೆ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಮುಹಮ್ಮದ್ ಆಸಿಫ್ ಹೇಳಿಕೆ ನೀಡಿದ್ದು, ಇಸ್ಲಾಮಾಬಾದ್‌ನ ತಾಳ್ಮೆ ಮುಗಿದಿದೆ. ನಾವು ಬಹಿರಂಗ ಯುದ್ಧದಲ್ಲಿದ್ದೇವೆ. ನಮ್ಮ ತಾಳ್ಮೆಯ ಪಾತ್ರೆ ಉಕ್ಕಿ ಹರಿಯುತ್ತಿದೆ. ನಾವು ಮುಕ್ತ ಯುದ್ಧದಲ್ಲಿದ್ದೇವೆ ಎಂದು ಹೇಳಿದ್ದಾರೆ.

ಪಾಕಿಸ್ತಾನ ಸೇನೆ ಅಫ್ಘಾನಿಸ್ತಾನದ ಮೇಲೆ ನಡೆಸಿದ ಮಾರಕ ವೈಮಾನಿಕ ದಾಳಿಗೆ ಪ್ರತೀಕಾರವಾಗಿ ತಾಲಿಬಾನ್ ಪಡೆಗಳು ಪಾಕಿಸ್ತಾನದ ಗಡಿ ಪಡೆಗಳ ಮೇಲೆ ದಾಳಿ ನಡೆಸಿತು. ಇದಕ್ಕೆ ಪ್ರತಿಕಾರವಾಗಿ ಕಾಬೂಲ್ ಮತ್ತು ಕಂದಹಾರ್ ಮೇಲೆ ಪಾಕ್ ಪಡೆಗಳು ದಾಳಿ ನಡೆಸಿವೆ. ಪಾಕಿಸ್ತಾನ ತನ್ನ 133 ಹೋರಾಟಗಾರರನ್ನು ಕೊಂದಿದೆ ಎಂದು ತಾಲಿಬಾನ್ ಹೇಳಿಕೊಂಡಿದೆ. ಅಲ್ಲದೆ 55 ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿದ್ದಾರೆ ಎಂದು ಹೇಳಿಕೊಂಡಿದೆ.

## ಸರಕು ವಿಮಾನ ರಸ್ತೆಗೆ ಅಪ್ಪಳಿಸಿ 15 ಜನರ ದುರ್ಮರಣ

**ಲಾ ಪಾಜ್:** ಬೊಲಿವಿಯಾ ರಾಜಧಾನಿಯ ಬಳಿ ಟೇಕ್ ಆಫ್ ಆದ ಕೆಲವೇ ಕ್ಷಣಗಳಲ್ಲಿ ಸರಕು ವಿಮಾನವೊಂದು ಅಪಘಾತಕ್ಕೀಡಾಗಿದ್ದು, ಹೆದ್ದಾರಿಯಲ್ಲಿ ಸುಮಾರು ಒಂದು ಡಜನ್ ವಾಹನಗಳಿಗೆ ಹಾನಿಯಾಗಿದ್ದು, ಕನಿಷ್ಠ 15 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬೊಲಿವಿಯಾದ ರಾಜಧಾನಿ ಲಾ ಪಾಜ್‌ನ ವಿಮಾನ ನಿಲ್ದಾಣದ ಬಳಿಯ ಹೆದ್ದಾರಿಯಲ್ಲಿರುವ ವಿಮಾನದಲ್ಲಿರುವವರು ಸತ್ತಿದ್ದಾರೆಯೇ ಅಥವಾ ಕಾರುಗಳಲ್ಲಿ ಸತ್ತಿದ್ದಾರೆಯೇ ಎಂದು ಅಗ್ನಿಶಾಮಕ ದಳದ ಮುಖ್ಯಸ್ಥ ಪಾವೆಲ್ ಟೋವರ್ ಸ್ಪಷ್ಟಪಡಿಸಿಲ್ಲ.

ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುವ ಚಿತ್ರಗಳ ಪ್ರಕಾರ, ವಿಮಾನವು ರನ್‌ವೇಯಿಂದ ಜಾರಿ, ನೆರೆಯ ಲಾ ಪಾಜ್‌ನ ಎಲ್ ಆಲ್ಟೊ ನಗರದಲ್ಲಿ ವಾಹನಗಳಿಗೆ ಡಿಕ್ಕಿ ಹೊಡೆದು ಪಕ್ಕದ ಹೊಲದಲ್ಲಿ ಬಿದ್ದಿದೆ.

ವಿಮಾನದ ಅವಶೇಷಗಳು, ಕಾರುಗಳನ್ನು ನಾಶಪಡಿಸಿದವು ಮತ್ತು ಶವಗಳು ರಸ್ತೆಯಲ್ಲಿ ಹರಡಿಕೊಂಡಿವೆ. ಟೋವರ್ ಪ್ರಕಾರ, ಕನಿಷ್ಠ 15 ವಾಹನಗಳು ಭಾಗಿಯಾಗಿದ್ದವು. ಅಗ್ನಿಶಾಮಕ ದಳದವರು ವಿಮಾನವನ್ನು ಆವರಿಸಿದ್ದ ಬೆಂಕಿಯನ್ನು



ನಂದಿಸುವಲ್ಲಿ ಯಶಸ್ವಿಯಾದರು.

ಬೊಲಿವಿಯನ್ ವಾಯುಪಡೆಗೆ ಸೇರಿದ ಹರ್ಕ್ಯುಲಸ್ ವಿಮಾನವು ಸೆಂಟ್ರಲ್ ಬ್ಯಾಂಕ್‌ನಿಂದ ಇತರ ನಗರಗಳಿಗೆ ಹೊಸ ನೋಟುಗಳನ್ನು ಸಾಗಿಸುತ್ತಿತ್ತು. ವಿಮಾನ ನಿಲ್ದಾಣದ ಹೊರಗೆ ದೊಡ್ಡ ಪ್ರಮಾಣದ ಹಣ ಹರಡಿತ್ತು, ಮತ್ತು ನೂರಾರು ಜನರು ಚೆಲ್ಲಿದ ಬಿಲ್‌ಗಳನ್ನು ಸಂಗ್ರಹಿಸಲು ಧಾವಿಸಿದರು ಎಂದು ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುವ ಚಿತ್ರಗಳು ತಿಳಿಸಿವೆ.

ಜನಸಮೂಹವನ್ನು ಚದುರಿಸಲು ಪೊಲೀಸರು ಗಲಭೆ ನಿರೋಧಕ ಸಾಧನಗಳನ್ನು ಬಳಸಬೇಕಾಯಿತು. ಅಧಿಕಾರಿಗಳು ಟರ್ಮಿನಲ್‌ಗೆ ಮತ್ತು ಅಲ್ಲಿಂದ ಹೊರಡುವ ಎಲ್ಲಾ ವಿಮಾನಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದರು.

## ಯುವ ಕಾಂಗ್ರೆಸ್ ಅಧ್ಯಕ್ಷನಿಗೆ ಜಾಮೀನು



**ನವದೆಹಲಿ:** ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ ಬಂಧಿಸಲ್ಪಟ್ಟ ಭಾರತೀಯ ಯುವ ಕಾಂಗ್ರೆಸ್ (ಐವೈಸಿ) ಅಧ್ಯಕ್ಷ ಉದಯ್ ಭಾನು ಚಿಬ್ ಅವರಿಗೆ ದೆಹಲಿ ನ್ಯಾಯಾಲಯ ಜಾಮೀನು ನೀಡಿದೆ. ಫೆ. 24 ರಂದು ನ್ಯಾಯಾಲಯವು ನೀಡಿದ್ದ ನಾಲ್ಕು ದಿನಗಳ ಪೊಲೀಸ್ ಕಸ್ಟಡಿ ಅಂತ್ಯಗೊಂಡ ಕಾರಣ ಇಂದು ಮುಂಜಾನೆ 1 ಗಂಟೆ ಸುಮಾರಿಗೆ ಚಿಬ್ ಅವರನ್ನು ಕರ್ತವ್ಯ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಯಿತು. ಡ್ಯೂಟಿ ಮ್ಯಾಜಿಸ್ಟ್ರೇಟ್ ವಂಶಿಕಾ ಮೆಹ್ತಾ ಅವರು ದೆಹಲಿ ಪೊಲೀಸರು ತಮ್ಮ ಕಸ್ಟಡಿಯನ್ನು ಏಳು ದಿನಗಳ ಕಾಲ ವಿಸ್ತರಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸುತ್ತಿದ್ದರು.

ಆದಾಗ್ಯೂ, ಅವರು ಅರ್ಜಿಯನ್ನು ವಜಾಗೊಳಿಸಿ ಜಾಮೀನು ನೀಡಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಚಿಬ್ ಅವರ ವಕೀಲರು, 50,000 ರೂ.ಗಳ ಶ್ಯೂರಿಟಿ ಬಾಂಡ್ ಮೇಲೆ ಮ್ಯಾಜಿಸ್ಟ್ರೇಟ್ ಜಾಮೀನು ನೀಡಿದ್ದಾರೆ ಮತ್ತು ನ್ಯಾಯಾಲಯವು ತಮ್ಮ ಕಕ್ಷಿದಾರರಿಗೆ ಅವರ ಪಾಸ್‌ಪೋರ್ಟ್ ಮತ್ತು ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳನ್ನು ಒಪ್ಪಿಸುವಂತೆ ನಿರ್ದೇಶಿಸಿದೆ ಎಂದು ತಿಳಿಸಿದರು.

ಫೆ. 24 ರಂದು, ಭಾರತ್ ಮಂಟಪದಲ್ಲಿ ನಡೆದ ಎಐ ಶೃಂಗಸಭೆಯ ಪ್ರತಿಭಟನೆಯಲ್ಲಿ ಚಿಬ್ ಪಾತ್ರದ ಬಗ್ಗೆ ಪ್ರಶ್ನಿಸಲು ನ್ಯಾಯಾಲಯವು ನಾಲ್ಕು ದಿನಗಳ ಪೊಲೀಸರ ಕಸ್ಟಡಿಗೆ ಅವಕಾಶ ನೀಡಿತು, ಈ ಸಂದರ್ಭದಲ್ಲಿ ಐವೈಸಿ ಸದಸ್ಯರು ತಮ್ಮ ಶರ್ಟ್‌ಗಳನ್ನು ತೆಗೆದು ಕೆಳಗೆ ಹಾಕಿದ್ದ ಟಿ-ಶರ್ಟ್‌ಗಳ ಮೇಲೆ ಮೋದಿ ವಿರೋಧಿ ಮತ್ತು ಕೇಂದ್ರ ವಿರೋಧಿ ಘೋಷಣೆಗಳನ್ನು ಪ್ರದರ್ಶಿಸಿದರು.

## 300 ಕ್ಕೂ ಅಧಿಕ ತಾಲಿಬಾನಿಗಳನ್ನು ಹತ್ಯೆ ಮಾಡಲಾಗಿದೆ ಎಂದ ಪಾಕ್ ಸೇನೆ

**ಇಸ್ಲಾಮಾಬದ್ :** ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದ ನಡುವಿನ ಯುದ್ಧ ತೀವ್ರಗೊಂಡಿದ್ದು, ತಾಲಿಬಾನ್ ಮತ್ತು ಸಹ ಸಂಘಟನೆಗಳ ಸುಮಾರು 300 ಮಂದಿಯನ್ನು ಹತ್ಯೆ ಮಾಡಲಾಗಿದೆ ಎಂದು ಪಾಕಿಸ್ತಾನ ಸೇನೆ ತಿಳಿಸಿದೆ.

ಅಫ್ಘಾನ್ ಹಾಗೂ ತಾಲಿಬಾನ್ ಪಡೆಗಳು 2,600 ಕಿ.ಮೀ ಗಡಿಯುದ್ದಕ್ಕೂ ದಾಳಿ ಮಾಡಿತ್ತು. ಏಕಕಾಲದಲ್ಲಿ 53 ಸ್ಥಳಗಳ ಮೇಲೆ ದಾಳಿ ನಡೆಸಲಾಗಿತ್ತು. ಇದಕ್ಕೆ ಪ್ರತಿಕಾರವಾಗಿ ಪಾಕಿಸ್ತಾನ ಸೇನೆ ದಾಳಿ ನಡೆಸಿದೆ ಎಂದು ಪಾಕಿಸ್ತಾನದ ಮಾಹಿತಿ ಸಚಿವ ಅತಾವುಲ್ಲಾ ತರಾರ್ ಮಾಧ್ಯಮಗಳಿಗೆ ಮಾಹಿತಿಯನ್ನು ನೀಡಿದ್ದಾರೆ.

ತಾಲಿಬಾನ್ ಆಡಳಿತ ಇರುವ ಅಫ್ಘಾನಿಸ್ತಾನದಲ್ಲಿ 397 ಮಂದಿಯನ್ನು ಹತ್ಯೆ ಮಾಡಲಾಗಿದೆ. ಅಲ್ಲದೆ, 450 ಕ್ಕೂ ಹೆಚ್ಚು ಜನರು ದಾಳಿಯಿಂದ ಗಾಯಗೊಂಡಿದ್ದಾರೆ. ಎಂದು ಅತಾವುಲ್ಲಾ ತರಾರ್ ಮಾಹಿತಿಯನ್ನು ನೀಡಿದ್ದಾರೆ.

ಇನ್ನು ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನ ಯುದ್ಧದ ಕುರಿತಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡಾ ಪ್ರತಿಕ್ರಿಯೆ ನೀಡಿದ್ದಾರೆ. ಅವರು ಮಾತನಾಡುತ್ತಾ ಪರೋಕ್ಷವಾಗಿ ಪಾಕಿಸ್ತಾನಕ್ಕೆ ಬೆಂಬಲವನ್ನು ಸೂಚಿಸಿದ್ದಾರೆ.



- ಪಾಕಿಸ್ತಾನ ಹಾಗೂ ಅಫ್ಘಾನಿಸ್ತಾನದ ನಡುವಿನ ಯುದ್ಧ
- ತಾಲಿಬಾನ್ ಗಳ ಮೇಲೆ ಪಾಕಿಸ್ತಾನ ಸೇನೆ ದಾಳಿ
- ಪಾಕ್ ಸೇನೆ ದಾಳಿಗೆ ತಾಲಿಬಾನ್ ಗಳ ಪ್ರತಿದಾಳಿ

ಅಷ್ಟೇ ಅಲ್ಲದೆ ಪಾಕಿಸ್ತಾನದ ಪ್ರಧಾನಿ ಮತ್ತು ಸೇನಾ ಮುಖ್ಯಸ್ಥರ ಬಗ್ಗೆ ಮೆಚ್ಚುಗೆ ಸೂಚಿಸಿದ್ದಾರೆ. ಅಲ್ಲದೆ ಯುದ್ಧದ ತೀವ್ರಗೊಂಡ ಹಿನ್ನೆಲೆಯಲ್ಲಿ ಮಧ್ಯ ಪ್ರವೇಶ ಮಾಡುತ್ತೀರಾ? ಎಂಬ ಪ್ರಶ್ನೆಗೆ ಅವರು ಉತ್ತರ ನೀಡಿದ್ದು, ಈ ಬಗ್ಗೆ ಪರಿಶೀಲನೆ ನಡೆಸುವುದಾಗಿ ಅವರು ತಿಳಿಸಿದ್ದಾರೆ.

ಈ ವಾರದ ಆರಂಭದಲ್ಲಿ ಪಾಕ್ ಸೇನೆ ತಾಲಿಬಾನ್ ನಿಯಂತ್ರಣ ಇರುವ ಪ್ರದೇಶಗಳ ಮೇಲೆ ವೈಮಾನಿಕ ದಾಳಿ ನಡೆಸಿತ್ತು. ಇದಕ್ಕೆ ಪ್ರತಿಕಾರವಾಗಿ ಅಫ್ಘಾನ್ ಪಡೆಗಳು ಮರು ದಾಳಿ ನಡೆಸಿದ್ದವು. ಇದಾದ ಬಳಿಕ ಅಫ್ಘಾನಿಸ್ತಾನದ ಕಾಬೂಲ್ ಮತ್ತು ಕಂದಹಾರ್ ಮೇಲೆ ಬಾಂಬ್ ದಾಳಿಯನ್ನು ಪಾಕಿಸ್ತಾನದ ಸೇನೆ ನಡೆಸಿತ್ತು.

ಈ ನಡುವೆ ತಾಲಿಬಾನ್‌ಗಳು ತಾವು ನಡೆಸಿದ ದಾಳಿಯಲ್ಲಿ 55 ಪಾಕಿಸ್ತಾನಿ ಸೈನಿಕರನ್ನು ಹತ್ಯೆ ಮಾಡಲಾಗಿದೆ ಎಂದು ಹೇಳಿಕೊಂಡಿದೆ. ಇನ್ನು ದಾಳಿಯಲ್ಲಿ ಮೃತಪಟ್ಟ ನಾಗರಿಕರ ಬಗ್ಗೆ ನಿಖರವಾದ ಮಾಹಿತಿಗಳು ಇನ್ನೂ ಸಿಕ್ಕಿಲ್ಲ. ಮುಂದಿನ ದಿನಗಳಲ್ಲಿ ಉಭಯ ಸೇನೆಗಳ ನಡುವೆ ಮತ್ತಷ್ಟು ಸಂಘರ್ಷ ನಡೆಯುವ ಸಾಧ್ಯತೆ ಇದೆ.

ಈ ಸಂದರ್ಭದಲ್ಲಿ ಅಮೆರಿಕಾ ಯಾವ ನಡೆಯನ್ನು ಅನುಸರಿಸಲಿದೆ ಎಂಬುವುದು ಕೂಡಾ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಪಾಕಿಸ್ತಾನಕ್ಕೆ ಈಗಾಗಲೇ ಪರೋಕ್ಷ ಬೆಂಬಲವನ್ನು ಅಮೆರಿಕಾ ನೀಡಿದ್ದು, ಮುಂದಿನ ದಿನಗಳಲ್ಲಿ ಯುದ್ಧದ ದಿಕ್ಕು ಯಾವ ರೀತಿ ಸಾಗಲಿದೆ ಎಂಬುವುದು ಕುತೂಹಲ ಕೆರಳಿಸಿದೆ.

## ಸಚಿವರು ಕರೆದಿದ್ದ ಪ್ರಮುಖ ಸಭೆಗಳಿಗೆ ಹಾಜರಾಗದ ಐಎಎಸ್ ಅಧಿಕಾರಿ ಅಮಾನತು

**ಮುಂಬೈ:** ನಿರ್ಣಾಯಕ ವಿಷಯಗಳ ಕುರಿತು ಮಾಹಿತಿ ನೀಡಲು ಸಚಿವರು ಕರೆದಿದ್ದ ಪ್ರಮುಖ ಸಭೆಗಳಿಗೆ ಹಾಜರಾಗದ ಕಾರಣ ಮಹಾರಾಷ್ಟ್ರ ಸರ್ಕಾರ ಭಾರತೀಯ ಆಡಳಿತ ಸೇವೆ (ಐಎಎಸ್) ಅಧಿಕಾರಿ ಮತ್ತು ರಾಜ್ಯದ ಮಾಲಿನ್ಯ ನಿಯಂತ್ರಣ ಸಂಸ್ಥೆಯ ಜಂಟಿ ನಿರ್ದೇಶಕರನ್ನು ಅಮಾನತುಗೊಳಿಸಿದೆ.

ಫೆ.26 ರಂದು ನಡೆದ ವಿಧಾನಸಭಾ ಅಧಿವೇಶನದಲ್ಲಿ, ಚಂದ್ರಾಪುರ ಜಿಲ್ಲೆಯಲ್ಲಿ ಮಾಲಿನ್ಯದ ಕುರಿತು ನಡೆದ ಚರ್ಚೆಗೆ ಪ್ರತಿಕ್ರಿಯಿಸಲು ರಾಜ್ಯ ಪರಿಸರ ಸಚಿವೆ ಪಂಕಜಾ ಮುಂಡೆ ಅವರನ್ನು ಕೇಳಲಾಯಿತು. ಮಹಾರಾಷ್ಟ್ರ ಮಾಲಿನ್ಯ ನಿಯಂತ್ರಣ ಮಂಡಳಿಯ (ಎಂಪಿಸಿಬಿ) ಸದಸ್ಯ ಕಾರ್ಯದರ್ಶಿಯೂ ಆಗಿರುವ 2011ರ ಬ್ಯಾಚ್‌ನ ಐಎಎಸ್ ಅಧಿಕಾರಿ ಎಂ. ದೇವೇಂದರ್ ಸಿಂಗ್ ಮತ್ತು ಎಂಪಿಸಿಬಿಯ ಜಂಟಿ ನಿರ್ದೇಶಕ ಸತೀಶ್ ಪಡ್ವಾಲ್ ಸೇರಿದಂತೆ




ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ಸಂಗ್ರಹಿಸಲು ಕರೆದಿದ್ದ ಸಭೆಗಳಿಗೆ ಹಾಜರಾಗದ ಕಾರಣ ವಿವರವಾದ ಬ್ರೀಫಿಂಗ್ ನೀಡಲು ಸಾಧ್ಯವಾಗುವುದಿಲ್ಲ ಎಂದು ಅವರು ಹೇಳಿದರು.

ಜ್ಞಾಪನೆಗಳ ಹೊರತಾಗಿಯೂ ಅಧಿಕಾರಿ ಸಭೆಯನ್ನು ತಪ್ಪಿಸಿಕೊಂಡಿದ್ದಲ್ಲದೆ, ತಾನು ಹಾಜರಾಗುವುದಿಲ್ಲ ಎಂದು ಸಂದೇಶವನ್ನು ಕಳುಹಿಸಿದ್ದಾರೆ ಎಂದು ಮುಂಡೆ ಸದನಕ್ಕೆ ತಿಳಿಸಿದ್ದಾರೆ ಎಂದು ವರದಿಯಾಗಿದೆ. ಇಂತಹ ಅವಿಧೇಯತೆಯು ಸಚಿವರ ಸಾರ್ವಜನಿಕರಿಗೆ ಉತ್ತರಿಸುವ ಸಾಮರ್ಥ್ಯಕ್ಕೆ ಅಡ್ಡಿಯಾಗುತ್ತದೆ ಎಂದು ಅವರು ಹೇಳಿದರು. ಸಚಿವರ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಿದ ಹಂಗಾಮಿ ಸ್ಪೀಕರ್ ದಿಲೀಪ್ ಲಾಂಡೆ, ಅಧಿಕಾರಿಯ ಗೈರುಹಾಜರಿಯನ್ನು ತೀವ್ರ ನಿರ್ಲಕ್ಷ್ಯ ಮತ್ತು ಶಾಸಕಾಂಗಕ್ಕೆ ಮಾಡಿದ ಅವಮಾನ ಎಂದು ಬಣ್ಣಿಸಿದರು. ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವಂತೆ ಅವರು ನಿರ್ದೇಶನ ನೀಡಿದರು. 24 ಗಂಟೆಗಳ ಒಳಗೆ, ರಾಜ್ಯ ಸರ್ಕಾರವು 1969 ರ ಅಖಿಲ ಭಾರತ ಸೇವೆಗಳ (ಶಿಸ್ತು ಮತ್ತು ಮೇಲ್ಮನವಿ) ನಿಯಮಗಳ ಅಡಿಯಲ್ಲಿ ಅಮಾನತು ಆದೇಶವನ್ನು ಹೊರಡಿಸಿತು. ಈ ವಿಷಯವು ಕಾರ್ಯಾಂಗ ಮತ್ತು ಶಾಸಕಾಂಗದ ನಡುವೆ ತೀವ್ರ ಚರ್ಚೆಗೆ ಕಾರಣವಾಯಿತು.

ಬಿಜೆಪಿ ನಾಯಕ ಸುಧೀರ್ ಮುಂಗಂಟಿವಾರ್ ಅಧಿಕಾರಿಯ ನಡವಳಿಕೆಯನ್ನು ಪ್ರಜಾಪ್ರಭುತ್ವದ ಕ್ರೂರ ಕೊಲೆ ಮತ್ತು ಸಂವಿಧಾನಕ್ಕೆ ಮಾಡಿದ ಅವಮಾನ ಎಂದು ಟೀಕಿಸಿದರು. ಅಧಿಕಾರಿಗಳು ಚುನಾಯಿತ ಪ್ರತಿನಿಧಿಗಳಿಗೆ ತಾವು ಜವಾಬ್ದಾರರು ಎಂಬುದನ್ನು ಅರ್ಥಮಾಡಿಕೊಳ್ಳಬೇಕು ಎಂದು ಅವರು ಹೇಳಿದರು.

# ಇರಾನ್-ಇಸ್ರೇಲ್ ಯುದ್ಧ: ಭಾರತದಲ್ಲಿ ಪೆಟ್ರೋಲ್-ಡೀಸೆಲ್, ಚಿನ್ನದ ಬೆಲೆ ಗಗನಕ್ಕೆ

### ● ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿಯ ಮೌಲ್ಯ ಮತ್ತಷ್ಟು ಪಾತಾಳಕ್ಕೆ ಕುಸಿಯುವ ಭೀತಿ ಇದೆ

**ನವದೆಹಲಿ:** ಇಸ್ರೇಲ್ ಮತ್ತು ಅಮೆರಿಕ ಪಡೆಗಳು ಜಂಟಿಯಾಗಿ ಇರಾನ್ ಮೇಲೆ ಭೀಕರ ಸೇನಾ ಕಾರ್ಯಾಚರಣೆ ಆರಂಭಿಸಿರುವುದು ಇಡೀ ವಿಶ್ವವನ್ನು ತಲ್ಲಣಗೊಳಿಸಿದೆ. ಮಧ್ಯಪ್ರಾಚ್ಯದಲ್ಲಿ ಯುದ್ಧದ ಕಾರ್ಮೋಡ ದಟ್ಟವಾಗುತ್ತಿದ್ದಂತೆ, ಜಾಗತಿಕ ಆರ್ಥಿಕತೆಯ ಮೇಲೆ ಕರಿನೆರಳು ಆವರಿಸಿದೆ. ಈ ಎರಡು ಬಣಗಳ ನಡುವಿನ ಸಂಘರ್ಷ ಕೇವಲ ಆ ಭೌಗೋಳಿಕ ಪ್ರದೇಶಕ್ಕೆ ಮಾತ್ರ ಸೀಮಿತವಾಗಿಲ್ಲ ಬದಲಾಗಿ ಸಾವಿರಾರು ಮೈಲಿಗಳಷ್ಟು ದೂರದಲ್ಲಿರುವ ಭಾರತದ ಆರ್ಥಿಕತೆಯ ಮೇಲೂ, ವಿಶೇಷವಾಗಿ ಜನಸಾಮಾನ್ಯರ ಜೇಬಿನ ಮೇಲೂ ನೇರ ಪರಿಣಾಮ ಬೀರುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ. ಪೆಟ್ರೋಲ್, ಡೀಸೆಲ್ ಮತ್ತು ಚಿನ್ನದ ಬೆಲೆಯಲ್ಲಿ ಭಾರಿ ಏರಿಕೆಯಾಗುವ ಆತಂಕ ಸೃಷ್ಟಿಯಾಗಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯ ಭೀತಿ ಯುದ್ಧದ ನೇರ ಮತ್ತು ಅತಿ ದೊಡ್ಡ ಪೆಟ್ಟು ಬೀಳುವುದು ಕಚ್ಚಾ ತೈಲ ಪೂರೈಕೆಯ ಮೇಲೆ. ಭಾರತವು ತನ್ನ ಒಟ್ಟು ತೈಲ ಬೇಡಿಕೆಯ ಶೇ. 80 ಕ್ಕಿಂತಲೂ ಹೆಚ್ಚಿನ ಪ್ರಮಾಣವನ್ನು ಆಮದು ಮಾಡಿಕೊಳ್ಳುತ್ತದೆ. ಮಧ್ಯಪ್ರಾಚ್ಯ ರಾಷ್ಟ್ರಗಳೇ ಭಾರತದ ಪ್ರಮುಖ ತೈಲ ಪೂರೈಕೆದಾರರು. ಇರಾನ್ ಮತ್ತು ಇಸ್ರೇಲ್ ನಡುವಿನ ಉದ್ವಿಗ್ನತೆಯಿಂದಾಗಿ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ದಿಢೀರ್ ಏರಿಕೆ ಕಂಡಿದೆ.

**ಇಡೀ ವಿಶ್ವ ತಲ್ಲಣ**

ಇದಕ್ಕೂ ಮಿಗಿಲಾಗಿ, ಜಾಗತಿಕ ತೈಲ ಸಾಗಣೆಯ ಶೇ. 20 ರಷ್ಟು ಪಾಲು ಹಾದುಹೋಗುವ ಹಾರ್ಮುಜ್ ಜಲಸಂಧಿಯನ್ನು ಇರಾನ್ ಮುಚ್ಚಿದರೆ, ಅಥವಾ ತೈಲ ಸಾಗಣೆ ಹಡಗುಗಳ ಮೇಲೆ ದಾಳಿ ನಡೆದರೆ, ಕಚ್ಚಾ ತೈಲದ ಬೆಲೆ ಬ್ಯಾರೆಲ್‌ಗೆ 100 ಡಾಲರ್ ಗಡಿ ದಾಟುವ ಅಪಾಯವಿದೆ. ಇದು ಸಂಭವಿಸಿದರೆ, ಭಾರತದ ತೈಲ ಮಾರುಕಟ್ಟೆ ಕಂಪನಿಗಳ ಮೇಲೆ ತೀವ್ರ ಆರ್ಥಿಕ ಹೊರೆ ಬೀಳಲಿದ್ದು, ದೇಶೀಯ ಮಾರುಕಟ್ಟೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಭಾರಿ ಪ್ರಮಾಣದಲ್ಲಿ ಹೆಚ್ಚಿಸುವುದು ಅನಿವಾರ್ಯವಾಗಲಿದೆ. ಇಂಧನ ಬೆಲೆ ಏರಿಕೆಯಾದರೆ ಸರಕು ಸಾಗಣೆ ವೆಚ್ಚ ಹೆಚ್ಚಾಗಿ, ಅಗತ್ಯ ವಸ್ತುಗಳ ಬೆಲೆಯೂ ಗಗನಕ್ಕೇರಲಿದ್ದು, ಹಣದುಬ್ಬರ ಮಿತಿಮೀರಲಿದೆ. ಇರಾನ್-ಇಸ್ರೇಲ್‌ನಲ್ಲಿ ಸಂಕಷ್ಟದಲ್ಲಿರುವ ಭಾರತೀಯರಿಗಾಗಿ ತುರ್ತು ಸಹಾಯವಾಣಿ ಸಂಖ್ಯೆ ಬಿಡುಗಡೆ ಚಿನ್ನದ ದರ ಗಗನಕ್ಕೆ ಮಧ್ಯಪ್ರಾಚ್ಯ ಬಿಕ್ಕಟ್ಟಿನ ಮತ್ತೊಂದು ನೇರ ಪರಿಣಾಮ ಚಿನ್ನದ ದರದ ಮೇಲಾಗಲಿದೆ. ಜಾಗತಿಕ ಮಟ್ಟದಲ್ಲಿ ಯಾವುದೇ ಯುದ್ಧ, ಆರ್ಥಿಕ ಅಸ್ಥಿರತೆ ಅಥವಾ ಬಿಕ್ಕಟ್ಟು ಎದುರಾದಾಗ ಷೇರುಪೇಟೆಗಳು ತೀವ್ರ ಕುಸಿತ ಕಾಣುತ್ತವೆ. ಷೇರುಪೇಟೆಯಲ್ಲಿನ ಅನಿಶ್ಚಿತತೆಗೆ ಹೆದರುವ ಜಾಗತಿಕ ಹೂಡಿಕೆದಾರರು, ತಮ್ಮ ಹಣವನ್ನು ಸುರಕ್ಷಿತ ತಾಣವಾದ ಚಿನ್ನದ ಮೇಲೆ ಹೂಡಿಕೆ ಮಾಡಲು ಮುಗಿಬೀಳುತ್ತಾರೆ. ಹೂಡಿಕೆದಾರರ ಈ ದಿಢೀರ್ ಬೇಡಿಕೆಯಿಂದಾಗಿ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಚಿನ್ನದ ಬೆಲೆ ಸಾರ್ವಕಾಲಿಕ ದಾಖಲೆಯ ಮಟ್ಟಕ್ಕೆ ಏರಿಕೆಯಾಗುವ ಸಾಧ್ಯತೆಯಿದೆ. ಭಾರತವು ವಿಶ್ವದ ಅತಿದೊಡ್ಡ ಚಿನ್ನದ ಗ್ರಾಹಕ ರಾಷ್ಟ್ರಗಳಲ್ಲಿ ಒಂದಾಗಿರುವುದರಿಂದ, ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಸಣ್ಣ ಬದಲಾವಣೆಯೂ ಸ್ಥಳೀಯ ಮಾರುಕಟ್ಟೆಯ ಮೇಲೆ ದೊಡ್ಡ ಪ್ರಭಾವ ಬೀರುತ್ತದೆ. ಮುಂಬರುವ ಮದುವೆ ಸೀಸನ್‌ನಲ್ಲಿ ಗ್ರಾಹಕರಿಗೆ ಈ ಬೆಲೆ ಏರಿಕೆ ಅಕ್ಷರಶಃ ಬರೆ ಎಳೆಯಲಿದೆ.



### ಭಾರತೀಯ ರೂಪಾಯಿ ಮೌಲ್ಯ ಕುಸಿತ

**ಕಚ್ಚಾ ತೈಲ ಆಮದು ವೆಚ್ಚ ಹೆಚ್ಚಾದಂತೆ, ಭಾರತವು ಹೆಚ್ಚಿನ ಡಾಲರ್‌ಗಳನ್ನು ಪಾವತಿಸಬೇಕಾಗುತ್ತದೆ. ಇದರಿಂದ ವಿದೇಶಿ ವಿನಿಮಯ ಮೀಸಲು ಕರಗಲಿದ್ದು, ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿಯ ಮೌಲ್ಯ ಮತ್ತಷ್ಟು ಪಾತಾಳಕ್ಕೆ ಕುಸಿಯುವ ಭೀತಿ ಇದೆ. ಒಂದು ವೇಳೆ ರೂಪಾಯಿ ಮೌಲ್ಯ ಕುಸಿತವಾದರೆ ಆಮದಾಗುವ ಪ್ರತಿಯೊಂದು ವಸ್ತುವನ್ನೂ ದುಬಾರಿಯಾಗಿಸಲಿದೆ. ಒಟ್ಟಿನಲ್ಲಿ, ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಈ ಕಾದಾಟವು ಬೇಗನೆ ತಣ್ಣಗಾಗದಿದ್ದರೆ, ಭಾರತೀಯ ಆರ್ಥಿಕತೆ ದೊಡ್ಡ ಮಟ್ಟದ ಆಘಾತವನ್ನು ಎದುರಿಸಬೇಕಾಗುತ್ತದೆ. ಕೇಂದ್ರ ಸರ್ಕಾರ ಮತ್ತು ಆರ್‌ಬಿಐ ಈ ಬಿಕ್ಕಟ್ಟನ್ನು ಹೇಗೆ ನಿಭಾಯಿಸಲಿವೆ ಕಾದುನೋಡಬೇಕಿದೆ.**

